# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 Issue : 32 WEDNESDAY 08-04-2026 PRGI No : KNKAN/26/A0962 Pages:4 Rs.2.00 M: 9742418836


## ಜನರೇ ಒತ್ತಾಯ ಮಾಡಿ ನಿಮ್ಮನ್ನು ಕಣಕ್ಕಿಳಿಸಿದ್ದರೇ, ನಿಮ್ಮ ಮಗ ಮೂರು ಬಾರಿ ಏಕೆ ಸೋತ? ಸಿದ್ದರಾಮಯ್ಯ



ದಾವಣಗೆರೆ: ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ, ಎಚ್.ಡಿ ದೇವೇಗೌಡ ಹಾಗೂ ಛಲವಾದಿ ನಾರಾಯಣ ಸ್ವಾಮಿ ಅವರುಗಳು ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಈ ಹಿಂದೆ ತಾವು ನೀಡಿರುವ ಹೇಳಿಕೆಗಳನ್ನು ಮತ್ತೊಮ್ಮೆ ಕೇಳಿಸಿಕೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಮಾಧ್ಯಮದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಈಗ ತಮ್ಮ ಅಸ್ತಿತ್ವಕ್ಕಾಗಿ ಬಿಜೆಪಿಗೆ ಸೇರಿರುವ ಈ ಜನರು ಹಿಂದೆ ಬಿಜೆಪಿ, ಆರ್‌ಎಸ್‌ಎಸ್ ಮತ್ತು ಮೋದಿ ಬಗ್ಗೆ ಏನು ಹೇಳಿದರು ಎಂದು ನಿಮಗೆ ತಿಳಿದಿಲ್ಲವೇ? ನಮ್ಮನ್ನು ಟೀಕಿಸಲು ಅವರಿಗೆ ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದ್ದಾರೆ.

ಬಡವರು ಮತ್ತು ನಿರ್ಗತಿಕರ ಮೇಲೆತ್ತುವ ಗುರಿಯನ್ನು ಹೊಂದಿರುವ ಖಾತರಿ ಯೋಜನೆಗಳನ್ನು ಬಿಜೆಪಿ ನಿರಂತರವಾಗಿ ಗುರಿಯಾಗಿಸುತ್ತಿದೆ ಆದರೆ ಫಲಾನುಭವಿಗಳು ಅವುಗಳನ್ನು ಮೆಚ್ಚಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದರು. ಬಡವರ ವಿರೋಧಿ ಮತ್ತು ಸಂವಿಧಾನ ವಿರೋಧಿ ಬಿಜೆಪಿಯನ್ನು ಬೆಂಬಲಿಸಲು ಜನರಿಗೆ ಯಾವುದೇ ಕಾರಣ ಸಿಗುತ್ತಿಲ್ಲ ಎಂದು ಅವರು ಹೇಳಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಜನರೇ ಅವರನ್ನು ತಂದು ಚುನಾವಣೆಗೆ ಕಣಕ್ಕಿಳಿಸಿದ್ದಾರೆ ಎಂಬ ಹೇಳಿಕೆಯ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಿಎಂ, ಹಾಗಾದರೆ ಅವರ ಮಗ ಚನ್ನಪಟ್ಟಣದಲ್ಲಿ ಏಕೆ ಸೋತನು? ಜನರು ಬಯಸಿದಾಗ ಚುನಾವಣೆಯಲ್ಲಿ ಸ್ಪರ್ಧಿಸುವುದು ತಪ್ಪಲ್ಲ. ಆದರೆ, ಅವರು ತಿರಸ್ಕರಿಸಿದಾಗ, ಈ ರೀತಿ ಮಾತನಾಡುವುದು ಸರಿಯಲ್ಲ ಎಂದರು.

ನಿಖಿಲ್ ಅವರನ್ನು ಜನರು ಮೂರು ಬಾರಿ ತಿರಸ್ಕರಿಸಿದರು, ನಾನು ಜೆಡಿಎಸ್ ಅಧ್ಯಕ್ಷರಾಗಿದ್ದಾಗ ಪಕ್ಷ 59 ??ಸ್ಥಾನಗಳನ್ನು ಗೆದ್ದಿತ್ತು, ಈಗ ಸಂಖ್ಯೆ 19 ಆಗಿದೆ ಎಂದು ಹೇಳಿದರು. ಸಚಿವ ಜಮೀರ್ ಅಹ್ಮದ್ ಖಾನ್ ದಾವಣಗೆರೆ ದಕ್ಷಿಣದಲ್ಲಿ ಹೆಚ್ಚು ಪ್ರಚಾರ ಮಾಡಲಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, "ಜಮೀರ್ ಕೇರಳ, ಬಾಗಲಕೋಟೆ ಮತ್ತು ದಾವಣಗೆರೆ ಸೇರಿದಂತೆ ಎಲ್ಲೆಡೆ ಕೆಲಸ ಮಾಡಿದ್ದಾರೆ. ಜಮೀರ್ ಪಕ್ಷದ ಶಿಸ್ತಿನ ಸಿಪಾಯಿ ಎಂದು ಸಿದ್ದರಾಮಯ್ಯ ತಿಳಿಸಿದರು.

## ಸಿದ್ದರಾಮಯ್ಯನವರು ಮುಖ್ಯಮಂತ್ರಿ ಅವಧಿ ಪೂರ್ಣಗೊಳಿಸುತ್ತಾರೆ: ಡಾ ಜಿ ಪರಮೇಶ್ವರ್

ಮೈಸೂರು: ರಾಜ್ಯ ಕಾಂಗ್ರೆಸ್ ನಲ್ಲಿ ನಾಯಕತ್ವ ಬದಲಾವಣೆಯ ಕುರಿತು ನಡೆಯುತ್ತಿರುವ ಊಹಾಪೋಹಗಳ ನಡುವೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಹಿರಂಗವಾಗಿ ಬೆಂಬಲ ಸೂಚಿಸಿರುವ ಗೃಹ ಸಚಿವ ಡಾ ಜಿ ಪರಮೇಶ್ವರ್, 2028ರವರೆಗೆ ಪೂರ್ಣ ಐದು ವರ್ಷದ ಅವಧಿಯನ್ನು ಪೂರೈಸಲಿದ್ದಾರೆ ಎಂದು ಹೇಳಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2023ರಲ್ಲಿ ಕಾಂಗ್ರೆಸ್ ಹೈಕಮಾಂಡ್ ಅಧಿಕೃತವಾಗಿ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿಯಾಗಿ ಘೋಷಿಸಿದೆ. ಪ್ರತಿ ಬಾರಿ ಹೈಕಮಾಂಡ್‌ನಿಂದ ಪ್ರತ್ಯೇಕ ಸ್ಪಷ್ಟೀಕರಣ ಅಗತ್ಯವಿಲ್ಲ. 2013ರಲ್ಲಿ ಐದು ವರ್ಷದ ಅವಧಿಯನ್ನು ಸ್ಪಷ್ಟವಾಗಿ ಘೋಷಿಸದಿದ್ದರೂ ಅವರು ಪೂರ್ಣಗೊಳಿಸಿದ್ದರು. ಈ ಬಾರಿ ಅವರ ಅವಧಿ 2028ರವರೆಗೆ ಇದೆ ಅದನ್ನು ಅವರು ಪೂರ್ಣಗೊಳಿಸಬೇಕು ಎಂದು ಹೇಳಿದರು.

**'ನಾಯಕತ್ವ ಸಂಕಷ್ಟವೇ ಇಲ್ಲ'**

ನಾಯಕತ್ವದಲ್ಲಿ ಭಿನ್ನಾಭಿಪ್ರಾಯ ಅಥವಾ 'ಪವರ್ ಶೇರಿಂಗ್' ಸೂತ್ರದ



ಬಗ್ಗೆ ಹರಿದಾಡುತ್ತಿರುವ ವದಂತಿಗಳನ್ನು ತಳ್ಳಿಹಾಕಿದ ಗೃಹ ಸಚಿವರು, ಹೈಕಮಾಂಡ್ ಯಾವುದೇ ಗೊಂದಲ ಸೃಷ್ಟಿಸಿಲ್ಲ ಎಂದು ಹೇಳಿದರು.

ಹೈಕಮಾಂಡ್ ಯಾವಾಗಾದರೂ ಬದಲಾವಣೆಯ ಬಗ್ಗೆ ಅಥವಾ ಅವಧಿ ಬಗ್ಗೆ ಮಾತನಾಡಿದೆಯೇ ಇತರರು ನೀಡುವ ಹೇಳಿಕೆಗಳು ಕೇವಲ ವೈಯಕ್ತಿಕ ಅಭಿಪ್ರಾಯಗಳು. ಡಿ ಕೆ ಶಿವಕುಮಾರ್ ನಮ್ಮ ನಾಯಕರು, ಕೆಪಿಸಿಸಿ ಅಧ್ಯಕ್ಷರು ಮತ್ತು ಉಪ ಮುಖ್ಯಮಂತ್ರಿಗಳು; ಅವರಿಗೆ ಯಾವುದೇ ಸಮಸ್ಯೆಯಿಲ್ಲ. ಮುಖ್ಯಮಂತ್ರಿ ಸ್ವತಃ ವಿಧಾನಸಭೆಯಲ್ಲಿ ಹೇಳಿದಂತೆ, ನಮ್ಮ ಎಲ್ಲಾ ಶಾಸಕರು ಮುಖ್ಯಮಂತ್ರಿಯಾಗುವ ಸಾಮರ್ಥ್ಯ ಹೊಂದಿದ್ದಾರೆ. ಆದ್ದರಿಂದ ವೈಯಕ್ತಿಕ ಅರ್ಹತೆ ಬಗ್ಗೆ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.

**'ಉಪಚುನಾವಣೆ ಫಲಿತಾಂಶವು ಮಾನದಂಡವಲ್ಲ'** ಮುಂದಿನ ಉಪ ಚುನಾವಣೆಯ ಫಲಿತಾಂಶಗಳ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಪರಮೇಶ್ವರ ಅವರು, ಅದು ಕರ್ನಾಟಕದ ರಾಜಕೀಯ ದಿಕ್ಕು ತೋರಿಸುವ ಕಾಂಪಸ್ ಆಗುವುದಿಲ್ಲ, ಸರ್ಕಾರದ ಕಾರ್ಯಕ್ಷಮತೆಯ ಸ್ಕೋರ್‌ಕಾರ್ಡ್ ಆಗುವುದಿಲ್ಲ ಎಂದು ಹೇಳಿದರು. "

ಫಲಿತಾಂಶಗಳಿಂದ ಸರ್ಕಾರದಲ್ಲಿ ಯಾವುದೇ ಬದಲಾವಣೆ ಆಗುವುದಿಲ್ಲ. ನಾವು ಎರಡೂ ಕ್ಷೇತ್ರಗಳಲ್ಲಿ ಗೆಲ್ಲುವ ವಿಶ್ವಾಸದಲ್ಲಿದ್ದೇವೆ. ಗ್ಯಾರಂಟಿ ಯೋಜನೆಗಳ ಜೊತೆಗೆ ಆಡಳಿತದ ಕಾರ್ಯಕ್ಷಮತೆಯನ್ನು ಗಮನಿಸಿ ಜನರು ಮತ ಹಾಕುತ್ತಾರೆ. ಬಿಜೆಪಿ ಮಾಡುತ್ತಿರುವ ಆರೋಪಗಳು ಆಧಾರರಹಿತವಾಗಿವೆ, ಜನರು ನಮ್ಮೊಂದಿಗಿದ್ದಾರೆ ಎಂದು ಹೇಳಿದರು.

**ಅಕ್ರಮ ಗ್ಯಾಸ್ ಮಾರಾಟ**

ಎಲ್ ಪಿಜಿ ಸಿಲಿಂಡರ್‌ಗಳ ಕಳ್ಳಬಜಾರ್ ಕುರಿತು ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ಪೊಲೀಸರ ಕಾನೂನುಬದ್ಧ ಮಿತಿಗಳನ್ನು ವಿವರಿಸಿದರು. ಈ ವಿಷಯದಲ್ಲಿ ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಲು ಅಥವಾ ಸ್ವತಂತ್ರವಾಗಿ ದಾಳಿ ನಡೆಸಲು ಸಾಧ್ಯವಿಲ್ಲ. ಇದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಆ ಇಲಾಖೆ ನಿರ್ದಿಷ್ಟ ಮಾಹಿತಿ ನೀಡಿದ ಬಳಿಕ ಮತ್ತು ನಮ್ಮ ಗಮನಕ್ಕೆ ತಂದಾಗ ಮಾತ್ರ ನಾವು ಕ್ರಮ ಕೈಗೊಳ್ಳುತ್ತೇವೆ ಹಾಗೂ ದಾಳಿ ನಡೆಸುತ್ತೇವೆ. ಅವರ ಸಮನ್ವಯವಿಲ್ಲದೆ ಸ್ವಯಂಪ್ರೇರಿತ ಪ್ರಕರಣ ದಾಖಲಿಸುವುದು ಕಾನೂನುಬದ್ಧವಾಗಿ ಸಾಧ್ಯವಿಲ್ಲ ಎಂದು ಹೇಳಿದರು.

## ಪಂಡಿತ ದೀನದಯಾಳ ಉಪಾಧ್ಯಾಯರು ಸ್ಥಾಪಿಸಿದ ಸಂಘಟನೆ ಇಂದು ಜಗತ್ತಿನಲ್ಲಿ ಬಲಿಷ್ಠ ಸಂಘಟನೆಯಾಗಿ ದೇಶದ ಅಧಿಕಾರ ಚುಕ್ಕಾನಿಯನ್ನು ಹಿಡಿದಿದೆ



ಗೋಕಾಕ: ತಾಲೂಕಿನ ಅಂಕಲಗಿ ಪಟ್ಟಣದಲ್ಲಿ ಭಾರತೀಯ ಜನತಾ ಪಾರ್ಟಿ ನಗರ ಹಾಗೂ ಗ್ರಾಮೀಣ ಮಂಡಲ ಮಟ್ಟದ ಪ್ರಶಿಕ್ಷಣ ಅಭಿಯಾನವನ್ನು ಉದ್ಘಾಟಿಸುತ್ತಿರುವದು.

**ಬೆಳಗಾವಿ ವಾರ್ತೆ ಗೋಕಾಕ:** ಸೈದ್ಧಾಂತಿಕ ನೆಲೆಗಟ್ಟಿನ ಮೇಲೆ ಪಂಡಿತ ದೀನದಯಾಳ ಉಪಾಧ್ಯಾಯರು ಸ್ಥಾಪಿಸಿದ ಸಂಘಟನೆ ಇಂದು ಜಗತ್ತಿನಲ್ಲಿ ಬಲಿಷ್ಠ ಸಂಘಟನೆಯಾಗಿ ದೇಶದ ಅಧಿಕಾರ ಚುಕ್ಕಾನಿಯನ್ನು ಹಿಡಿದಿದೆ ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ಮಂಗಳವಾರ ತಾಲೂಕಿನ ಅಂಕಲಗಿ ಪಟ್ಟಣದಲ್ಲಿ ಭಾರತೀಯ ಜನತಾ ಪಾರ್ಟಿ ನಗರ ಹಾಗೂ ಗ್ರಾಮೀಣ ಮಂಡಲ ಮಟ್ಟದ ಪ್ರಶಿಕ್ಷಣ ಅಭಿಯಾನವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ದೀನದಯಾಳ ಉಪಾಧ್ಯಾಯರ ನಂತರ ಡಾ.ಶ್ಯಾಮಪ್ರಸಾದ ಮುಖರ್ಜಿ ಇವರು ಜನ ಸಂಘದ ಅಧ್ಯಕ್ಷರಾಗಿ ಸಂಘವನ್ನು ಮತ್ತಷ್ಟು ಬಲಿಷ್ಠಗೊಳಿಸಿದರು. 1980ರಲ್ಲಿ ಸ್ಥಾಪನೆಗೊಂಡ ಬಿಜೆಪಿ ಪಕ್ಷ ಅಟಲಬಿಹಾರಿ ವಾಜಪೇಯಿ ಅವರ ನೇತ್ರತ್ವದಲ್ಲಿ ಬಲಿಷ್ಠ ರಾಜಕೀಯ ಪಕ್ಷವಾಗಿ ಬೆಳೆಯುತ್ತ ದೇಶದಲ್ಲಿ ಅಧಿಕಾರಕ್ಕೆ ಬಂದಿತು. ಈಗಿನ ಮೋದಿ ಸರಕಾರವು ಪಂಡಿತ ದೀನದಯಾಳ ಉಪಾಧ್ಯಾಯರ ಸಿದ್ಧಾಂತ ಹಾಗೂ ಆದರ್ಶಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತ ದೇಶವನ್ನು ವಿಶ್ವಗುರುವಾಗಿಸಲು ಶ್ರಮಿಸುತ್ತಿದೆ ಎಂದರು.

ಜನಸಂಘ ಹಾಗೂ ಆರ್‌ಎಸ್‌ಎಸ್ ಸಂಘಟನೆಗಳು ಸೇರಿದಂತೆ ಎಲ್ಲರ ಹೋರಾಟದಿಂದ ದೇಶಕ್ಕೆ ಸ್ವಾತಂತ್ರ್ಯ ದೊರಕಿದೆ. ಭಾರತೀಯ ಜನತಾ ಪಕ್ಷ ರಾಷ್ಟ್ರ ಸಂರಕ್ಷಣೆ ಹಾಗೂ ಅಭಿವೃದ್ಧಿ ಗುರಿಯೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಕಾರ್ಯಕರ್ತರು ಪಕ್ಷವನ್ನು ಮತ್ತಷ್ಟು ಬಲಿಷ್ಠಗೊಳಿಸಲು ಶ್ರಮಿಸುವಂತೆ ಕರೆ ನೀಡಿದರು.

ವೇದಿಕೆಯ ಮೇಲೆ ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಮಾಜಿ ಶಾಸಕ ಎಮ್ ಎಲ್ ಮುತ್ತೇನ್ನವರ, ಓಬಿಸಿ ಮೋರ್ಚಾ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಸಿ, ಪ್ರಶಿಕ್ಷಣ ವರ್ಗ ಪ್ರಮುಖ ನಿತೀನ ಚೌಗಲೆ, ಜಿಲ್ಲಾ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಆನಂದ ಅತ್ತುಗೋಳ, ಪಕ್ಷದ ಹಿರಿಯ ಮುಖಂಡ ಪ್ರಮೋದ ಜೋಶಿ, ಬಾಳೇಶ ಗಿಡ್ಡನವರ, ಸುರೇಶ ಪತ್ತಾರ ಇದ್ದರು.

## ಸೇವೆ ಮಾಡುವ ಮೂಲಕ ಸಾಯಿಬಾಬಾರ ಕೃಪೆಗೆ ಪಾತ್ರರರಾಗಿ-ಪದ್ಮನಾಭ ಪೈ



ಮೂಡಲಗಿ: ಪಟ್ಟಣದಲ್ಲಿ ಶ್ರೀ ಸತ್ಯಸಾಯಿ ಬಾಬಾರವರ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥವುನ್ನು ಸೇವಾ ಕ್ಷೇತ್ರದ ಸದಸ್ಯರು, ಗಣ್ಯರು ಸ್ವಾಗತಿಸಿಕೊಂಡರು.

**ಬೆಳಗಾವಿ ವಾರ್ತೆ ಮೂಡಲಗಿ:** ಸತ್ಯಸಾಯಿ ಬಾಬಾರ ಅನುಗ್ರಹವಾಗಬೇಕಾದರೇ ನಾ ಅನ್ನುವ ಅಹಂಕಾರ ಬಿಟ್ಟು ನಾರಾಯಣ ಸೇವೆಯಂತಹ ಸೇವೆ ಮಾಡುವ ಮೂಲಕ ಅವರ ಅನುಗ್ರಹ ಪಡೆದುಕೊಳ್ಳಲು ಸಾಧ್ಯ ಎಂದು ಶ್ರೀ ಸತ್ಯಸಾಯಿ ಸೇವಾ ಸಂಸ್ಥೆಗಳ ರಾಜ್ಯಾಧ್ಯಕ್ಷ ಪದ್ಮನಾಭ ಪೈ ಹೇಳಿದರು.

ಶ್ರೀ ಸತ್ಯಸಾಯಿ ಬಾಬಾರವರ ಜನ್ಮ ಶತಮಾನೋತ್ಸವ ಸಂಭ್ರಮದ ಅಂಗವಾಗಿ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥವು ಮೂಡಲಗಿ ಪಟ್ಟಣದಲ್ಲಿ ಮಂಗಳವಾರ ಶೋಭಾಯಾತ್ರೆಗೆ ಚಾಲನೆ ನೀಡಿ ಮಾತನಾಡಿ, ವರ್ಷದಲ್ಲಿ ಒಂದುಸಲವಾದರೂ ನಾರಾಯಣ ಸೇವೆ ಮಾಡಿ ಎಂದು ಶ್ರೀ ಸತ್ಯಸಾಯಿ ಸೇವಾ ಸಂಸ್ಥೆಗಳ ರಾಜ್ಯ ಸೇವಾ ಸಂಯೋಜಕಿ ಪ್ರೀಯಾ ಪಿ.ಪೈ, ಬೆಳಗಾವಿ ಜಿಲ್ಲಾಧ್ಯಕ್ಷ ವಸಂತ ಬಾಳಿಗಾ ಮಾತನಾಡಿದರು.

ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥವನ್ನು ನಾಗನೂರ ಪಟ್ಟಣದಿಂದ ಸ್ವಾಗತಿಸಿಕೊಂಡು ಮೂಡಲಗಿ ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆ ಬಳಿಯಿಂದ ಆರತಿ, ಕುಂಭ ಮೇಳ ಹಾಗೂ ವಿವಿಧ ವಾದ್ಯ ಮೇಳಗಳೊಂದಿಗೆ ಭವ್ಯ ಮೆರವಣಿಗೆ ಮೂಲಕ ಪಟ್ಟಣದ ಕಲ್ಮೇಶ್ವರ ಸರ್ಕಲ್, ಕಿತ್ತೂರ ಚೆನ್ನಮ್ಮಾ ಸರ್ಕಲ್, ಕರೆಮ್ಮಾದೇವಿ ಸರ್ಕಲ್, ಸಂಗಪ್ಪಣ್ಣ ಅಂಗಡಿ ಸರ್ಕಲ್ ಮೂಲಕ ಶ್ರೀ ಸಾಯಿ ಮಂದಿರಕ್ಕೆ ಕರೆತಂದರು.

ಈ ಸಂದರ್ಭದಲ್ಲಿ ವೃಂದಾ ಬಾಳಿಗಾ, ಸುರೇಖಾ ಕುರಡೆಕರ, ಮಹಾದೇವಿ ಹುಕ್ಕೇರಿ, ಕುಸುಮಾ ಪಾಟೀಲ, ಸಂಜೀವ ಪಾಟೀಲ, ಲೋಹಿತ ಕಲಾಲ, ವಿಕ್ರಮ ಮುರಳಿ, ಜೀವನ ಬಾಗಲಕೋಟೆ ಹಾಗೂ ಪಟ್ಟಣದ ಶ್ರೀ ಸತ್ಯಸಾಯಿ ಸೇವಾ ಕ್ಷೇತ್ರದ ಸದಸ್ಯರು ಉಪಸ್ಥಿತರಿದ್ದರು.

## ಬಸವ ಜಯಂತಿ ನಿಮಿತ್ಯ ಏ.26 ರಿಂದ ಏ.29 ರವರೆಗೆ ಪ್ರವಚನ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕಿನ ಬೆಟಗೇರಿ ಗ್ರಾಮದಲ್ಲಿ ಬಸವ ಜಯಂತಿ ನಿಮಿತ್ಯ ಏ.26 ರಿಂದ ಏ.29 ರವರೆಗೆ ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಪ್ರವಚನ ಹಮ್ಮಿಕೊಂಡಿರುವ ಪ್ರಯುಕ್ತ ಬೆಟಗೇರಿ ಪಿಕೆಪಿಎಸ್ ಸಭಾಂಗಣದಲ್ಲಿ ಇತ್ತೀಚೆಗೆ ಸ್ಥಳೀಯರಿಂದ ಪೂರ್ವಭಾವಿ ಸಭೆ ಜರುಗಿತು.

ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ನಡೆಯಲಿರುವ ಪ್ರವಚನ ಆಯೋಜನೆ ಸಮಿತಿ ಸಂಚಾಲಕ ಈಶ್ವರ ಬಳಿಗಾರ ಮಾತನಾಡಿ, ಏ.26 ರಿಂದ ಏ.29 ರವರೆಗೆ ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮಿಜಿ ಅವರಿಂದ ಐದು ದಿನಗಳ ಕಾಲ ಪ್ರತಿ ದಿನ ಸಾಯಂಕಾಲ 7 ಗಂಟೆಯಿಂದ 8 ಗಂಟೆಯವರೆಗೆ ಪ್ರವಚನ, ಏ.30 ರಂದು ಮುಂಜಾನೆ 10 ಗಂಟೆಗೆ ಕೊಪ್ಪಳ ಗವಿಸಿದ್ಧೇಶ್ವರ ಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಅವರಿಂದ ಬೆಟಗೇರಿ ಗ್ರಾಮದಲ್ಲಿ ಪ್ರವಚನ ಜರುಗಲಿದೆ. ಸ್ಥಳೀಯರ ಸಹಾಯ, ಸಹಕಾರ ಅವಶ್ಯಕವಾಗಿದೆ. ಸಹಾಯ, ಸಹಕಾರ ನೀಡಬೇಕೆಂದು ಸ್ಥಳೀಯರಲ್ಲಿ ಮನವಿ ಮಾಡಿಕೊಂಡರು.



ಗೋಕಾಕ: ಬೆಟಗೇರಿ ಗ್ರಾಮದ ಪಿಕೆಪಿಎಸ್ ಸಭಾಂಗಣದಲ್ಲಿ ಕೊಪ್ಪಳ ಮತ್ತು ಹೊಸಳ್ಳಿ ಶ್ರೀಗಳಿಂದ ಪ್ರವಚನ ಆಯೋಜನೆ ಪ್ರಯುಕ್ತ ಸ್ಥಳೀಯರಿಂದ ಪೂರ್ವಭಾವಿ ಸಭೆ ಜರುಗಿತು.

ಸ್ಥಳೀಯ ಪಿಕೆಪಿಎಸ್ ಅಧ್ಯಕ್ಷ ಬಸವಂತ ಕೋಣಿ ಮಾತನಾಡಿ, ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಬೆಟಗೇರಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ಪ್ರವಚನ ಆಯೋಜನೆಗೆ ಅಗತ್ಯವಾದ ಸಕಲ ಕಾರ್ಯಕ್ಕೆ ಸಹಾಯ, ಸಹಕಾರ ನೀಡುವುದಾಗಿ ಈ ವೇಳೆ ಭರವಸೆ ನೀಡಿದರು.

ಬೆಟಗೇರಿ ಗ್ರಾಪಂ ಗ್ರಂಥಾಲಯ ಮತ್ತು ಅರಿವು ಕೇಂದ್ರದ ಮೇಲ್ವಿಚಾರಕ ಬಸವರಾಜ ಪಣದಿ ಪ್ರವಚನ ಆಯೋಜನೆಯ ಹಲವಾರು ಮಹತ್ವದ ವಿಷಯಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ಥಳೀಯ ವೇಧಮೂರ್ತಿ ಈರಯ್ಯ ಹಿರೇಮಠ, ಸಂಗಯ್ಯ ಹಿರೇಮಠ ಸಮ್ಮುಖ ವಹಿಸಿದ್ದರು.

ಲಕ್ಷ್ಮಣ ನೀಲಣ್ಣವರ, ಲಕ್ಷ್ಮಣ ಸೋಮಗೌಡ್ರ, ಗೌಡಪ್ಪ ದೇಯಣ್ಣವರ, ಈಶ್ವರಚಂದ್ರ ಬೆಟಗೇರಿ, ಈರಸಂಗಪ್ಪ ದೇಯಣ್ಣವರ, ಈರಣ್ಣ ಬಳಿಗಾರ, ಶ್ರೀಧರ ದೇಯಣ್ಣವರ, ಹಜರತ ಮಿರ್ಜಾನಾಯ್ಕ, ಈರಪ್ಪ ದೇಯಣ್ಣವರ, ಹನುಮಂತ ವಗ್ಗರ, ರಾಮಣ್ಣ ನೀಲಣ್ಣವರ, ದುಂಡಪ್ಪ ಕಂಬಿ, ಅಡಿವೆಪ್ಪ ಮುರಗೋಡ, ಮಲ್ಲಪ್ಪ ಪಣದಿ, ಸುಭಾಷ ಕರೆಣ್ಣವರ, ಸುರೇಶ ಬಾಣಸಿ, ಭೀಮಶೆಪ್ಪ ಹೊಂಗಲ ಸೇರಿದಂತೆ ಕೊಪ್ಪಳ ಮತ್ತು ಹೊಸಳ್ಳಿ ಶ್ರೀಗಳಿಂದ ಹಮ್ಮಿಕೊಂಡಿರುವ ಪ್ರವಚನ ಆಯೋಜನೆ ಸಮಿತಿ ಪದಾಧಿಕಾರಿಗಳು, ಸದಸ್ಯರು, ಯುವಕರು, ಸ್ಥಳೀಯ ಹಿರಿಯ ನಾಗರಿಕರು ಇದ್ದರು.

## ಟೇಕ್ವಾಂಡೊ ಸ್ಪರ್ಧೆ: ಲಕ್ಮೀ ರಡರಟ್ಟಿಗೆ ಬೆಳ್ಳಿ




ಲಕ್ಷ್ಮಿ ಮಲ್ಲಪ್ಪ ರಡರಟ್ಟಿ

**ಬೆಳಗಾವಿ ವಾರ್ತೆ ಮೂಡಲಗಿ:** ಬೆಂಗಳೂರಿನ ಕೋರಮಂಗದಲ್ಲಿ ಇಂಡಿಯಾ ಟೇಂಕ್ವಾಡೊ ಫೆಡರೇಷನ್ ನಿಂದ ಜರುಗಿದ ರಾಷ್ಟ್ರ ಮಟ್ಟದ ಮಹಿಳೆಯರ ಪ್ಯಾರಾ ಟೇಂಕ್ವಾಡೊ ಸ್ಪರ್ಧೆಯಲ್ಲಿ ಮೂಡಲಗಿಯ ಲಕ್ಷ್ಮಿ ಮಲ್ಲಪ್ಪ ರಡರಟ್ಟಿ ಬೆಳ್ಳಿ ಪದಕ ಪಡೆದುಕೊಂಡಿದ್ದಾರೆ. ಈ ಮೂಲಕ ಮಂಗೋಲಿಯಾ ದೇಶದಲ್ಲಿ ನಡೆಯುವ 11ನೇ ಏಷಿಯನ್ ಪ್ಯಾರಾ ಟೇಂಕ್ವಾಂಡೊ ಸ್ಪರ್ಧೆಗೆ ಅವರು ಆಯ್ಕೆಯಾಗಿದ್ದಾರೆ. ಕಳೆದ ವರ್ಷ 10ನೇ ಏಷಿಯನ್ ಟೇಂಕ್ವಾಂಡೊದಲ್ಲಿ ಸ್ಪರ್ಧಿಸಿ ಕಂಚಿನ ಪದಕ ಗಳಿಸಿದರು.

# ಜಡಿಸಿದ್ಧೇಶ್ವರ ಜಾತ್ರಾ ಮಹೋತ್ಸವಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಮೂಡಲಗಿ:** ಈ ಭಾಗದಲ್ಲಿ ಪವಾಡಪುರುಷ ಎಂದೇ ಪ್ರಸಿದ್ಧಿ ಹೊಂದಿರುವ ಜಡಿ ಸಿದ್ಧೇಶ್ವರ ಮಠದ ಜಾತ್ರೆಯು ಬಹು ವಿಶೇಷತೆಗಳಿಂದ ಕೂಡಿದ್ದು, ಹಗ್ಗ ಕಟ್ಟಿ ಎಳೆಯದೇ ರಥೋತ್ಸವ ನಡೆಯುವುದೇ ಈ ಜಾತ್ರೆಯ ಅಪರೂಪದ ದೃಶ್ಯವಾಗಿದೆ ಎಂದು ಬೆಮುಲ್ ಅಧ್ಯಕ್ಷರೂ ಆಗಿರುವ ಶಾಸಕ ಬಾಲಚಂದ್ರ ಜಾರಕಿಹೊಳಿಯವರು ತಿಳಿಸಿದರು.

ಸೋಮವಾರ ತಾಲ್ಲೂಕಿನ ಸುಣಧೋಳಿ ಗ್ರಾಮದ ಇತಿಹಾಸ ಪ್ರಸಿದ್ಧ ಜಡಿಸಿದ್ಧೇಶ್ವರ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಹಲವು ಪ್ರತೀತಿಗಳನ್ನು ಶ್ರೀಮಠವು ಹೊಂದಿದೆ ಎಂದು ಅವರು ಹೇಳಿದರು.

ಸುಣಧೋಳಿ ಎಂದಾಕ್ಷಣ ನೆನಪಾಗುವುದೇ ಜಡಿಸಿದ್ಧೇಶ್ವರ ಮಠ. ಬ್ರಿಟಿಷರ ಕಾಲದಿಂದಲೂ ಈ ಮಠಕ್ಕೆ ಅನೇಕ ಇತಿಹಾಸವಿದೆ ಎಂದು ಹಿರಿಯರು ಹೇಳುತ್ತಿರುತ್ತಾರೆ. ಬ್ರಿಟಿಷರ ಕಾಲದ ಅವಧಿಯ ಜಾತ್ರೆಯ ವೇಳೆಯಲ್ಲಿ ಪ್ಲೇಗ್ ಎಂಬ ಮಾರಕ ಸೋಂಕು ಆವರಿಸಿದ್ದರಿಂದ ಜಾತ್ರೆಯನ್ನು ರದ್ದು ಮಾಡುವಂತೆ, ರಥವನ್ನು ಎಳೆಯದಂತೆ ಬ್ರಿಟಿಷ್ ಸರ್ಕಾರವು ಇಲ್ಲಿನ ಭಕ್ತರಿಗೆ ಆಜ್ಞೆ ಮಾಡಿತ್ತು. ಇದರಿಂದ ಭಕ್ತ ವೃಂದದವರು ಆತಂಕಕ್ಕೆ ಒಳಗಾದರು. ಬ್ರಿಟಿಷರ ಮಾತಿಗೆ ಗೌರವ ಕೊಟ್ಟು, ಜಡಿಸಿದ್ಧೇಶ್ವರ ಮೂರ್ತಿ ಮತ್ತು ರಥದ ಚಕ್ರಗಳಿಗೆ ಪೂಜೆ ಮಾಡುವ ಅನುಮತಿಯನ್ನು ಪಡೆದು ಪೂರ್ವ ಸಿದ್ಧತೆಗಳನ್ನು ಮಾಡಿದ್ದರಂತೆ. ರಥವನ್ನು ಎಳೆಯದಂತೆ ಬ್ರಿಟಿಷ್ ಅಧಿಕಾರಿಗಳು ಆದೇಶ ನೀಡಿದ್ದರಿಂದ ಭಕ್ತರು ಕೈ ಜೋಡಿಸಿ "ಹರ–ಹರ ಮಹಾದೇವ, ಜಡಿಸಿದ್ಧೇಶ್ವರ ಮಹಾರಾಜ್ ಕೀ ಜೈ" ಎಂದು ಜೈಕಾರ ಹಾಕಿದಾಗ, ರಥವು ತನ್ನಿಂತಾನೇ ಚಲಿಸಿ, ನಂತರ ತನ್ನ ಮೂಲ ಸ್ಥಳಕ್ಕೆ ಬಂದು ನಿಂತಿತು ಎಂಬುದು ಇತಿಹಾಸಗಳಿಂದ ತಿಳಿದು ಬಂದಿದೆ ಎಂದು ಅವರು ತಿಳಿಸಿದರು.

ಆ ಕಾರಣದಿಂದ ಪ್ರತಿ ವರ್ಷವೂ ದವನದ ಹುಣ್ಣಿಮೆಯ ಮುಗಿದ ನಂತರ ನಾಲ್ಕನೇ ದಿನಕ್ಕೆ ಜಾತ್ರೆಯ ರಥೋತ್ಸವವು ಸಡಗರ– ಸಂಭ್ರಮದಿಂದ ನಡೆಯುತ್ತಿದ್ದು, ನೆರೆಯ ರಾಜ್ಯದ ಭಕ್ತರು ಸಹ ಇದರಲ್ಲಿ ಭಕ್ತಿಪೂರ್ವಕವಾಗಿ ಪಾಲ್ಗೊಳ್ಳುತ್ತಿದ್ದಾರೆ. ಜಾತಿ, ಮತ, ಪಂಥಗಳನ್ನು ಮೀರಿ ಈ ಸದ್ಭಾವನಾ ಜಾತ್ರೆಯಲ್ಲಿ ಭಾಗವಹಿಸಿ ಜಡಿಸಿದ್ಧೇಶ್ವರ ಕೃಪೆಗೆ ಪಾತ್ರರಾಗುತ್ತಾರೆ ಎಂದು ಅವರು ತಿಳಿಸಿದರು.

ಶ್ರೀ ಮಠದ ಪೀಠಾಧಿಪತಿ ಶಿವಾನಂದ ಮಹಾಸ್ವಾಮಿಗಳು ಈ ಭಾಗದಲ್ಲಿ ಧಾರ್ಮಿಕ ವಾತಾವರಣವನ್ನು ನಿರ್ಮಿಸುತ್ತಿದ್ದಾರೆ. ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಕ್ಷೇತ್ರದಲ್ಲಿ ಅನೇಕ ಕಾರ್ಯಗಳನ್ನು ಕೈಗೊಳ್ಳುತ್ತಿದ್ದಾರೆ. ಎಲ್ಲ ಜಾತಿಯ ಜನಾಂಗದವರನ್ನು ವಿಶ್ವಾಸಕ್ಕೆ ಪಡೆದುಕೊಂಡು ಪ್ರತಿ ವರ್ಷವೂ ಜರುಗುವ ಐತಿಹಾಸಿಕ ಜಾತ್ರೆಯನ್ನು ಯಶಸ್ವಿಯಾಗಿ ಮುನ್ನೆಡುಸುತ್ತಿದ್ದಾರೆ. ಶ್ರೀಗಳ ಆಶಯದಂತೆ ಜಡಿಸಿದ್ಧೇಶ್ವರ ಜಾತ್ರೆಯು ಸಂದರ್ಭದಲ್ಲಿ ಭಕ್ತರ ಅನುಕೂಲಕ್ಕಾಗಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ನಾನು ಕೂಡಿಕೊಂಡು ಕಾಲುವೆಗೆ ನೀರು ಹರಿಸಲು ಕ್ರಮ ತೆಗೆದುಕೊಳ್ಳುತ್ತೇವೆ. ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರನ್ನು ಬಿಡಲಾಗುತ್ತಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ಶಿವಾನಂದ ಮಹಾಸ್ವಾಮಿಗಳು ಶಾಸಕ ಬಾಲಚಂದ್ರ ಜಾರಕಿಹೊಳಿಯವರನ್ನು ಸತ್ಕರಿಸಿ ಆಶೀರ್ವಾದ ಮಾಡಿದರು.

ಈ ಸಂದರ್ಭದಲ್ಲಿ ಸುಣಧೋಳಿ ಮತ್ತು ಸುತ್ತಮುತ್ತಲಿನ ಅನೇಕರು ಉಪಸ್ಥಿತರಿದ್ದರು. ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಜಡಿಸಿದ್ಧೇಶ್ವರ ರಥೋತ್ಸವಕ್ಕೆ ಚಾಲನೆ ನೀಡಿದರು.

# ವಿಶ್ರಾಂತ ಪ್ರಾಧ್ಯಾಪಕ ಎಸ್. ವೈ. ಪಾಟೀಲ್ ನಿಧನ



**ಬೆಳಗಾವಿ ವಾರ್ತೆ ಬೆಳಗಾವಿ:** ಗೋಕಾಕ ತಾಲೂಕಿನ ಅಂಕಲಗಿ ಪ್ರತಿಷ್ಠಿತ ಎಸ್.ಎ. ಪದವಿ ಪೂರ್ವ ಮಹಾವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ, ಆಧ್ಯಾತ್ಮಿಕ ಚಿಂತಕ ಹಾಗೂ ಶ್ರೇಷ್ಠ ಸಾಮಾಜಿಕ ಕಾರ್ಯಕರ್ತ ಸುಲಧಾಳ ಗ್ರಾಮದ ನಿವಾಸಿ ಪ್ರೊ ಎಸ್. ವೈ. ಪಾಟೀಲ್ ಅವರು ದಿನಾಂಕ 5 ರಂದು ನಿಧನರಾದರು. ಅವರಿಗೆ ಸುಮಾರು 80 ವರ್ಷ ವಯಸ್ಸಾಗಿತ್ತು.

ಮೃತರಿಗೆ ಪತ್ನಿ ಪುತ್ರ ಹಿರಿಯ ಐಎಎಸ್ ಅಧಿಕಾರಿ ಹಾಗೂ ಕೃಷಿ ಇಲಾಖೆಯ ಆಯುಕ್ತ ವೈ. ಎಸ್. ಪಾಟೀಲ, ಮೂವರು ಪುತ್ರಿಯರು ಒಬ್ಬ ಕಿರಿಯ ಸಹೋದರ ಅಪಾರ ಬಂಧು ಬಳಗ ಹಾಗೂ ಶಿಷ್ಯವರ್ಗವಿದೆ

ಇತಿಹಾಸ ಪ್ರಾಧ್ಯಾಪಕರಾಗಿ ಅಪಾರ ಹೆಸರು ಗಳಿಸಿದ್ದ ಅವರು ನಿವೃತ್ತಿಯ ನಂತರ ತಮ್ಮ ಜೀವನವನ್ನು ರಾಮಕೃಷ್ಣ ಮಿಷನ್ ಆಶ್ರಮದ ಸೇವೆಗೆ ಮೀಸಲಿಟ್ಟಿದ್ದರು.

ಅವರು ಮಗ ಐಎಎಸ್ ಅಧಿಕಾರಿಯಾಗಿದ್ದರೂ ನಿವೃತ್ತಿಯ ನಂತರ ಮಗನ ಜೊತೆ ವಾಸಿಸದೇ ರಾಮಕೃಷ್ಣ ಆಶ್ರಮದ ಸೇವೆಯಲ್ಲಿ ನಿರತರಾಗಿದ್ದರು. ತಮ್ಮ ಮಗನನ್ನು ಸರಳ, ಪ್ರಾಮಾಣಿಕ ಹಾಗೂ ದಕ್ಷ ಅಧಿಕಾರಿಯಾಗಿ ರೂಪಿಸುವುದು ಅವರ ಕನಸಾಗಿತ್ತು

ವಿಜಯಪುರದ ಸಿದ್ಧೇಶ್ವರ ಸ್ವಾಮೀಜಿಗಳ ಕಟ್ಟಾ ಅನುಯಾಯಿಯಾಗಿದ್ದ ಅವರು, ಸ್ವಾಮೀಜಿಗಳ ಪ್ರವಚನ ಎಲ್ಲಿದ್ದರೂ ಅಲ್ಲಿಗೆ ತೆರಳಿ ಕೇಳುವುದು ಅವರ ಅಭ್ಯಾಸವಾಗಿತ್ತು.

ನಿವೃತ್ತ ಶಿಕ್ಷಕ ಹಾಗೂ ಕನ್ನಡ ಸಾಹಿತ್ಯ ಪರಿಷತ್ ಬೆಳಗಾವಿ ಜಿಲ್ಲಾ ಘಟಕದ ಸಕ್ರಿಯ ಕಾರ್ಯಕರ್ತರಾದ ರಾಯನಗೌಡ ಪಾಟೀಲ್ ಅವರ ಸಹೋದರರಾಗಿದ್ದಾರೆ

ಅವರ ನಿಧನಕ್ಕೆ ನಿವೃತ್ತ ಶಿಕ್ಷಕ ಹಾಗೂಚಂದರಗಿ ಕ್ರೀಡಾ ಶಾಲೆಯ ನಿರ್ದೇಶಕ ಬಾಳೇಶ ಬರಗಾಲಿ, ಸೇರಿದಂತೆ ಅನೇಕರು ಸಂತಾಪ ಸೂಚಿಸಿದ್ದಾರೆ.



**ಬೆಳಗಾವಿ ವಾರ್ತೆ ಗೋಕಾಕ:** ನಗರದ ಸ್ವರಧಾರೆ ಬಳಗದವರು ರವಿವಾರದಂದು ಆಯೋಜಿಸಿದ್ಧ ಸಂಗೀತ ಕಾರ್ಯಕ್ರಮಕ್ಕೆ ಇಲ್ಲಿಯ ಶೂನ್ಯ ಸಂಪಾದನ ಮಠದ ಶ್ರೀ ಬಸವಪ್ರಭು ಸ್ವಾಮಿಜಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಹಾಂತೇಶ ತಾಂವಶಿ, ಮಲ್ಲಿಕಾರ್ಜುನ ಕಲ್ಲೋಳಿ, ರಜನಿ ಜೀರಗ್ಯಾಳ, ಮಲ್ಲಿಕಾರ್ಜುನ ವಕ್ಕುಂದ, ಕಲಾವಿದರಾದ ವಿಜಯಲಕ್ಷ್ಮೀ ಹಿರೇಮಠ, ಬಾಳಾಸಾಹೇಬ ಕುಲಕರ್ಣಿ, ದಿನೇಶ ಜುಗಳಿ, ಮಹಾದೇವ ಹಿರೇಮಠ ಇದ್ದರು.



ಗೋಕಾಕ: ನಗರಕ್ಕೆ ರವಿವಾರದಂದು ಆಗಮಿಸಿದ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥಕ್ಕೆ ಇಲ್ಲಿಯ ಶ್ರೀ ಸತ್ಯಸಾಯಿ ಸೇವಾ ಸಮಿತಿಯವರು ಭವ್ಯವಾದ ಮೆರವಣಿಗೆಯೊಂದಿಗೆ ಸ್ವಾಗತಿಸಿದರು.




ಗೋಕಾಕ: ಸಾಮಾಜಿಕ ಕಾರ್ಯಕರ್ತ, ಕರ್ನಾಟಕ ರಾಜ್ಯ ಪತ್ರಕರ್ತರ ವೇದಿಕೆ ರಾಜ್ಯಾಧ್ಯಕ್ಷ ಅಶೋಕ ಭಜಂತ್ರಿ ಅವರಿಗೆ ಅಮೆರಿಕಾದ ವಾಷಿಂಗ್ಟನ್ ಯುನಿವರ್ಸಿಟಿಯ ವತಿಯಿಂದ ಸಮಾಜ ಸೇವಾ ಕ್ಷೇತ್ರದಲ್ಲಿ ಮಾಡಿರುವ ಸಾಧನೆಯನ್ನು ಗುರುತಿಸಿ ಗೌರವ ಡಾಕ್ಟರೇಟ್ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಗೋವಾ ರಾಜ್ಯದ ವಡಗಾಂವದ ಖಾಸಗಿ ಹೊಟೇಲ್ ದಲ್ಲಿ ಶನಿವಾರದಂದು ಜರುಗಿದ ಸಮಾರಂಭದಲ್ಲಿ ಅಶೋಕ ಭಜಂತ್ರಿ ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಯಿತು.

# ಡಾ.ಬಿ.ಆರ್.ಅಂಬೇಡ್ಕರ್ ಬದುಕು ಮತ್ತು ಬರಹ ಕುರಿತು ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆ



**ಬೆಳಗಾವಿ ವಾರ್ತೆ ಧಾರವಾಡ:** ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕು ಆಡಳಿತ, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆಗಳು ಸ್ಥಳೀಯ ದಲಿತ, ಕನ್ನಡ ಪರ ಹಾಗೂ ಇತರೆ ಸಂಘಟನೆಗಳ ಸಹಯೋಗದಲ್ಲಿ ಭಾರತ ರತ್ನ ಡಾ.ಬಿ. ಆರ್.ಅಂಬೇಡ್ಕರ್ ಅವರ ಜಯಂತಿ ನಿಮಿತ್ಯ ಡಾ.ಬಿ.ಆರ್. ಅಂಬೇಡ್ಕರ್ ಅವರ ಬದುಕು ಮತ್ತು ಬರಹ ಕುರಿತು ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆ ಆಯೋಜಿಸಿದೆ. ಸ್ಪರ್ಧೆಯು ಏಪ್ರೀಲ್ 12 ರಂದು ಬೆಳಿಗ್ಗೆ 9 ಗಂಟೆಗೆ ಕುಷ್ಟಗಿ ಪಟ್ಟಣದ ಕ್ರೈಸ್ಟ್ ದಿ ಕಿಂಗ್ ಶಾಲೆಯಲ್ಲಿ ನಡೆಯಲಿದೆ. ಈ ರಸಪ್ರಶ್ನೆ ಸ್ಪರ್ಧೆಯಲ್ಲಿ ಯಾವುದೇ ವಯೋಮಿತಿ, ವಿದ್ಯಾರ್ಹತೆಯ ನಿರ್ಬಂಧ ಇರುವುದಿಲ್ಲ, ಎಲ್ಲ ಆಸಕ್ತರಿಗೂ ಮುಕ್ತ ಅವಕಾಶವಿರುತ್ತದೆ. ರಾಜ್ಯದ ಯಾವುದೇ ಜಿಲ್ಲೆಗಳ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡಿನ ನಕಲು ಪ್ರತಿ ಒದಗಿಸಿ ಭಾಗವಹಿಸಬಹುದು. ಮೊದಲ ಸುತ್ತಿನಲ್ಲಿ 50 ಅಂಕಗಳ ಬಹುಆಯ್ಕೆ ಮಾದರಿಯ ಸುತ್ತು, ಈ ಸುತ್ತಿನಲ್ಲಿ ಅತಿ ಹೆಚ್ಚು ಅಂಕಗಳಿಸಿದ ಮೊದಲ 12 ಅಭ್ಯರ್ಥಿಗಳು ಎರಡನೇ ಸುತ್ತಿಗೆ ಆಯ್ಕೆಯಾಗುತ್ತಾರೆ. ಈ 12 ಅಭ್ಯರ್ಥಿಗಳನ್ನು 6 ತಂಡಗಳಾಗಿ ವಿಂಗಡಿಸಿ ಎರಡನೇ ಹಂತದ ಮೌಖಿಕ ಸುತ್ತು ನಡೆಸಲಾಗುವುದು. ವಿಜೇತ ತಂಡಗಳಿಗೆ 50 ಸಾವಿರ ರೂ. ಪ್ರಥಮ ಬಹುಮಾನ, 30 ಸಾವಿರ ರೂ.ದ್ವಿತೀಯ ಬಹುಮಾನ ಹಾಗೂ 20 ಸಾವಿರ ರೂ.ಗಳ ತೃತೀಯ ಬಹುಮಾನ ನೀಡಲಾಗುವುದು. ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ನೀಡಲಾಗುವುದು. ರಸಪ್ರಶ್ನೆ ಸ್ಪರ್ಧೆಯ ಪಠ್ಯ ಡಾ.ಬಿ. ಆರ್.ಅಂಬೇಡ್ಕರ್ ಅವರ ಜೀವನ ಮತ್ತು ಶಿಕ್ಷಣ, ರಾಷ್ಟ್ರೀಯ ಹೋರಾಟ, ಭಾರತ ಸಂವಿಧಾನ ರಚನೆ, ಶಿಕ್ಷಣ, ಸಂಘಟನೆ, ಹೋರಾಟ ತತ್ವಗಳು, ಚಿಂತನೆಗಳು, ಮೀಸಲಾತಿ, ಮಹಿಳಾ ಹಕ್ಕುಗಳು, ಜಾಗತಿಕ ಮಹಾನಾಯಕರಾಗಿ ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಪ್ರಸ್ತುತ ದಿನಮಾನ. ಆಸಕ್ತರು ಏಪ್ರಿಲ್ 11 ರ ಒಳಗಾಗಿ ಈ ಮೊಬೈಲ್ ನಂಬರುಗಳ ಮೂಲಕ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಭರಮಪ್ಪ ಪಿ–9731799080 ಮೂಲಕ ಸಂಪರ್ಕಿಸಬಹುದು ಎಂದು ಕುಷ್ಟಗಿ ವೃತ್ತದ ಪೊಲೀಸ್ ಇನ್ಸಪೆಕ್ಟರ್ ವಿಶ್ವನಾಥ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಂಗಾರು ಪೂರ್ವ ಕೃಷಿ ಪರಿಕರ ಮಾರಾಟಗಾರರ ಸಭೆ ಹಾಗೂ ಯೂರಿಯಾ ವಿತರಣಾ ತಂತ್ರಾಂಶದ ಕುರಿತು ಜಾಗೃತಿ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಗದಗ:** ಕೃಷಿ ಸಂಶೋಧನಾ ಕೇಂದ್ರ, ಗದಗದಲ್ಲಿ ದಿ: 6–4–2026 ರಂದು ಮುಂಗಾರು ಪೂರ್ವ ಕೃಷಿಪರಿಕರ ಮಾರಾಟಗಾರರ ಸಭೆ ಹಾಗೂ ಯುರಿಯಾ ವಿತರಣಾ ತಂತ್ರಾಂಶದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಅವರು ಮಾತನಾಡಿ ರೈತರು ರಸಗೊಬ್ಬರ ಖರೀದಿಸಲು ಇನ್ನು ಮುಂದೆ ಎಫ್.ಐ.ಡಿ ಸಂಖ್ಯೆಗಳನ್ನು ಕಡ್ಡಾಯವಾಗಿ ಹೊಂದಿರಬೇಕು. ಅಲ್ಲದೇ, ತಮ್ಮ ಎಲ್ಲಾ ಜಮೀನುಗಳನ್ನು ಸಹ ಎಫ್. ಐ.ಡಿಗೆ ಕಡ್ಡಾಯವಾಗಿ ಜೋಡಿಸಿರಬೇಕು. ಈ ಕುರಿತು ರಾಜ್ಯ ಸರ್ಕಾರದ ಕೃಷಿ ಇಲಾಖೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ರೈತನ ಹಿಡುವಳಿ ಹಾಗೂ ಬೆಳೆ ಆಧಾರದ ಮೇಲೆ ರಸಗೊಬ್ಬರವನ್ನು ಕೆ ಕಿಸಾನ್ ತಂತ್ರಜ್ಞಾನ ಹಾಗೂ ಕಔಖ ಮಶೀನ್ ಮೂಲಕವೇ ವಿತರಣೆ ಮಾಡಲಾಗುವುದು. ಇದರಿಂದ, ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟಕ್ಕೆ ಕಡಿವಾಣ ಹಾಕಲು ಹಾಗೂ ರೈತರು ಅನವಶ್ಯಕವಾಗಿ ಹೆಚ್ಚುವರಿ ರಸಗೊಬ್ಬರ ಬಳಸದಂತೆ ನಿಯಂತ್ರಿಸಿ ಮಣ್ಣಿನ ಫಲವತ್ತತೆ ಕಾಯ್ದುಕೊಳ್ಳಲು ಸಹಾಯವಾಗುವ ಬಗ್ಗೆ ತಿಳಿಸಿದರು.

ಪ್ರತಿಯೊಬ್ಬ ರಸಗೊಬ್ಬರ ವ್ಯಾಪಾರಸ್ಥರು ಒಬ್ಬ ಕೃಷಿ ವಿಜ್ಞಾನಿಯಂತೆ ರೈತರಿಗೆ ತಿಳುವಳಿಕೆ ನೀಡಿ ದ್ರವ ರೂಪದ ರಸಗೊಬ್ಬರಗಳನ್ನು ಹಾಗೂ ಕಾಂಪ್ಲೆಕ್ಸ್ ರೂಪದ ರಸಗೊಬ್ಬರಗಳನ್ನು ಬಳಸಲು ಮನವರಿಕೆ ಮಾಡಿಕೊಡುವಂತೆ ಸೂಚಿಸಿದರು. ನಿಗದಿಪಡಿಸಿದ ಬೆಲೆಣಟಿಜಜಜಿಟಿಜಜಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡದಂತೆ, ರಸಗೊಬ್ಬರದ ದರ ಹಾಗೂ ದಾಸ್ತಾನನ್ನು ಸಾರ್ವಜನಿಕರಿಗೆ ಕಾಣುವ ಹಾಗೆ ಪ್ರದರ್ಶಿಸುವಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. ತಪ್ಪಿದ್ದಲ್ಲಿ ಪರವಾನಿಗೆ ಅಮಾನತು ಅಥವಾ ರದ್ದು ಮಾಡುವ ಎಚ್ಚರಿಕೆ ನೀಡಿದರು.

ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವನವರ ಪ್ರಸ್ತಾವಿಕವಾಗಿ ಮಾತನಾಡಿ, ಈ ಹಿಂದಿನ 2025ರ ಮುಂಗಾರು ಹಂಗಾಮಿನ ಅತೀವೃಷ್ಟಿ ಸಮಯದಲ್ಲಿ ರಸಗೊಬ್ಬರಗಳ ಅಧಿಕ ಬೇಡಿಕೆ ಎದುರಾದಾಗ ತಾಲೂಕಿನ ರಸಗೊಬ್ಬರ ವ್ಯಾಪಾರಸ್ಥರು ಇಲಾಖೆಯೊಂದಿಗೆ ಸಹಕರಿಸಿ ಪರಸ್ಥಿತಿ ನಿಭಾಯಿಸುವಲ್ಲಿ ಬಹಳ ಸಹಕಾರ ನೀಡಿದ್ದೀರಿ. ಪ್ರಸಕ್ತ ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ಧಗಳ ಪರಿಣಾಮವಾಗಿ ರಸಗೊಬ್ಬರ ತಯಾರಿಕೆ ಮತ್ತು ಪೂರೈಕೆಯಲ್ಲಿ ವ್ಯತ್ಯೆಯವಾಗುವ ಸಾಧ್ಯತೆ ಇದೆ. ಕೃಷಿ ಇಲಾಖೆಯು ಗೊಬ್ಬರ ತಯಾರಿಕಾ ಕಂಪನಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಹೆಚ್ಚಿನ ಪ್ರಮಾಣದಲ್ಲಿ ತಾಲೂಕಿನ ರೈತರಿಗೆ ಗೊಬ್ಬರ ಸಿಗುವಂತೆ ಪ್ರಯತ್ನಿಸುತ್ತಿದೆ. ಕಾರಣ, ತಾಲೂಕಿನ



ರಸಗೊಬ್ಬರ ವ್ಯಾಪಾರಸ್ಥರು ಈ ಹಂಗಾಮಿನಲ್ಲಿಯೂ ತಮಗೆ ಲಭ್ಯವಿರುವ ರಸಗೊಬ್ಬರವನ್ನು, ವಿಶೇಷವಾಗಿ ಅದರಲ್ಲೂ ಯುರಿಯಾ ಗೊಬ್ಬರವನ್ನು ಎಫ್ಐಡಿ \ ಆಧಾರಿತ ಯುರಿಯಾ ವಿತರಣಾ ತಂತ್ರಾಂಶವನ್ನು ಬಳಸಿ ಪಿಓಸ್ ಮಶೀನ್ ಮೂಲಕ ರೈತರ ದಾಖಲೆಗಳನ್ವಯ ನಿರ್ದಿಷ್ಟ ಮಿತಿಯಲ್ಲಿ ವಿತರಿಸಲು ಸಹಕರಿಸಿ ಎಲ್ಲ ರೈತರ ಹಿತ ಕಾಪಾಡಬೇಕು ಎಂದು ಸೂಚಿಸಿದರು.

ಮುಖ್ಯ ಅತಿಥಿಗಳಾಗಿ ಉಪ ಕೃಷಿ ನಿರ್ದೇಶಕರಾದ ಶ್ರೀಮತಿ ಸ್ಫೂರ್ತಿ ಜಿ.ಎಸ್, ಜಿಲ್ಲಾ ವಿಚಕ್ಷಣಾ ಅಧಿಕಾರಿ ಶ್ರೀಮತಿ ಮೇಘನಾ ನಾಡಗೀರ್, ಕೃಷಿ ಸಂಶೋಧನಾ ಕೇಂದ್ರ, ಗದಗ ಮುಖ್ಯಸ್ಥೆ ಶ್ರೀಮತಿ ಕಲಾವತಿ ಹಾಗೂ ಕೃಷಿಪರಿಕರ ಮಾರಾಟಗಾರರ ಸಂಘದ ಉಪಾಧ್ಯಕ್ಷರಾದ ಪ್ರಕಾಶ ಕಗದಾಳ ಭಾಗವಹಿಸಿದ್ದರು.

ರಸಗೊಬ್ಬರ ವ್ಯಾಪಾರಸ್ಥರ ಸಂಘದ ಕಾರ್ಯದರ್ಶಿ ಸಂಜಯ್ ರೊದ್ದಂ ಮಾತನಾಡಿ, ಕೃಷಿ ಇಲಾಖೆಯ ಮಾರ್ಗಸೂಚಿಗಳ ಪ್ರಕಾರ ಎಲ್ಲ ವಿತರಕರು ರೈತರ ಹಿತ ಕಾಯುವಲ್ಲಿ ಇಲಾಖೆಗೆ ಸಹಕರಿಸುವುದಾಗಿ ತಿಳಿಸಿದರು.

ಇಲಾಖೆಯ ಕೃಷಿ ಅಧಿಕಾರಿಗಳಾದ ಶ್ರೀಮತಿ ಸೌಮ್ಯ, ಶ್ರೀಮತಿ ರಾಜೇಶ್ವರಿ ಹಾಗೂ ಶ್ರೀಮತಿ ಬಸವರಾಜೇಶ್ವರಿ ಇವರು ಯುರಿಯಾ ವಿತರಣಾ ತಂತ್ರಾಶದ ಬಗ್ಗೆ ರಸಗೊಬ್ಬರ ಮಾರಾಟಗಾರರಿಗೆ ವಿವರಿಸಿದರು. ಗದಗ ತಾಲ್ಲೂಕಿನ ಖಾಸಗಿ ಕೃಷಿ ಪರಿಕರ ಮಾರಾಟಗಾರರು, ಕೃಷಿ ಪತ್ತಿನ ಸಹಕಾರಿ ಸಂಘದ ಸದಸ್ಯರು ಹಾಗೂ ರೈತ ಉತ್ಪಾದಕ ಕಂಪನಿಗಳ ಪ್ರತಿನಿಧಿಗಳು ಸಭೆಯಲ್ಲಿ ಹಾಜರಿದ್ದರು.

# ಬಾಬು ಜಗಜೀವನ್‌ರಾಂ ಜಯಂತಿ ಆಚರಣೆ

**ಬೆಳಗಾವಿ ವಾರ್ತೆ ನವಲಗುಂದ:** ದೇಶಾದ್ಯಂತ 'ಬಾಬುಜಿ' ಎಂದೇ ಕರೆಯಲ್ಪಡುವ ಜಗಜೀವನ ರಾವ್ ರವರು ರಾಷ್ಟ್ರೀಯ ಧೀಮಂತ ನಾಯಕ, ಸ್ವಾತಂತ್ರ ಮತ್ತು ಸಾಮಾಜಿಕ ನ್ಯಾಯ ಹೋರಾಟಗಾರ ಹಾಗೂ ಅತ್ಯುತ್ತಮ ಸಂಸದೀಯ ಪಟುವಾ ಗಿದ್ದರು ಎಂದು ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀ ಗಣೇಶ ಧೋಂಗಡಿ ಹೇಳಿದರು.

ಅವರು ಸ್ಥಳೀಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾದ ದೇಶದ ಮೊದಲ ಉಪ ಪ್ರಧಾನಿ ಡಾ ಬಾಬು ಜಗಜೀವನರಾಮರವರ ಜಯಂತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ಬಾಬು ಜಗಜೀವನ ರಾವ್ ಅವರು ಸ್ವಾತಂತ್ರ



ಹೋರಾಟಗಾರರಾಗಿ, ಸಂವಿಧಾನ ರಚನಾ ಸಭೆಯ ಸದಸ್ಯರಾಗಿ ಮತ್ತು ಮೊದಲ ಉಪ ಪ್ರಧಾನಿಯಾಗಿ ನಮ್ಮ ದೇಶಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ.

ಬಾಲ್ಯದಿಂದಲೂ ಅಸ್ಪೃಶ್ಯತೆಯ ವಿರುದ್ಧ ಹೋರಾಟ ಮಾಡುತ್ತಾ, ರಾಜಕೀಯದಲ್ಲೂ ತಮ್ಮ ಛಾಪನ್ನು ಮೂಡಿಸಿ ಕೃಷಿಯಲ್ಲಿ ಸಹ ಮಹತ್ತರ ಬದಲಾವನೆಗಳನ್ನು ತಂದು ಹಸಿರು ಕ್ರಾಂತಿಯ ಹರಿಕಾರರು ಎಂದು ಚಿರಪರಿತರಾದರು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಎಂ ಬಿ ಬಾಗಡಿ ಮಾತನಾಡಿ ಭಾರತದಲ್ಲಿ ದೀರ್ಘ ಕಾಲದಿಂದ ಬೆಳೆದುಕೊಂಡು ಬಂದಿದ್ದ ಮೇಲು–ಕೀಳು ತಾರತಮ್ಯ, ಜಾತಿ ಪದ್ಧತಿ, ಅಸ್ಪೃಶ್ಯ ಎಂಬ ಮನೋಭಾವಗಳನ್ನು ತೊಡೆದು ಹಾಕಲು ಸಾಮಾಜಿಕ ನೆಲೆಗಟ್ಟಿನಲ್ಲಿ ಹೋರಾಡಿದವರು ಕೆಲವೇ ಕೆಲವು ನಾಯಕರಲ್ಲಿ ಬಾಬು ಜಗಜೀವನ ರಾಮ್ ಒಬ್ಬರು ಎಂದರು.

ಕಾರ್ಯಕ್ರಮದಲ್ಲಿ ಮೊದಲು ಎಲ್ಲ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಡಾ ಬಾಬು ಜಗಜೀವನರಾಮ ಇವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವದರ ಮೂಲಕ ಗೌರವ ಸಲ್ಲಿಸಿದರು. ಮಲ್ಲಿಕಾರ್ಜುನ ಗಡಾದ ಸ್ವಾಗತಿಸಿ ನಿರೂಪಿಸಿದರು

# ಭಾರತ ರತ್ನ ಸಂವಿಧಾನ ಶಿಲ್ಪಿ ಡಾ॥ಬಿ.ಆರ್.ಅಂಬೇಡ್ಕರ ಅವರ ಜಯಂತಿ ಸಾಧಕರ ಸನ್ಮಾನಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನ

ಧಾರವಾಡ: ಭಾರತ ರತ್ನ ಸಂವಿಧಾನ ಶಿಲ್ಪಿ ಡಾ॥ಬಿ.ಆರ್.ಅಂಬೇಡ್ಕರ ರವರ 135 ನೇ ಜನ್ಮ ದಿನಾಚರಣೆ ಅಂಗವಾಗಿ ಪರಿಶಿಷ್ಟ ಜಾತಿಯ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ, ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಏಪ್ರೀಲ್ 14, 2026 ರಂದು ಸನ್ಮಾನಿಸಲು ನಿರ್ಧರಿಸಲಾಗಿದೆ.

ಪರಿಶಿಷ್ಟ ಜಾತಿಯ ಜನಾಂಗದವರ ಶ್ರೇಯಸ್ಸಿಗಾಗಿ ಶ್ರಮಿಸಿರುವ ವ್ಯಕ್ತಿಗಳು ಅರ್ಜಿ ನಮೂನೆಗಳನ್ನು ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಯ ಕಚೇರಿಗಳಿಂದ ಪಡೆದು, ಭರ್ತಿ ಮಾಡಿದ ಅರ್ಜಿಯ ಜೊತೆಗೆ ದಾಖಲಾತಿಗಳನ್ನು ಲಗತ್ತಿಸಿ, ಆಯಾ ತಾಲ್ಲೂಕು ಕಚೇರಿಗಳಿಗೆ ಏಪ್ರೀಲ್ 9, 2026 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ:0836–2447201 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂಡಲಗಿ ಸಹಕಾರಿ ಬ್ಯಾಂಕ್‌ಗೆ 1.36 ಕೋಟಿ ರೂ ಲಾಭ: ಢವಳೇಶ್ವರ



**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದ 'ಮೂಡಲಗಿ ಸಹಕಾರಿ ಪ್ರಸಕ್ತ ಸಾಲಿನ ಆರ್ಥಿಕ ವರ್ಷದ ಅಂತ್ಯಕ್ಕೆ 1.36 ಕೋಟಿ ರೂಪಾಯಿ ಲಾಭಗಳಿಸಿ ಪ್ರಗತಿ ಪಥದತ ಸಾಗಿದೆ" ಎಂದು ಬ್ಯಾಂಕ ಅಧ್ಯಕ್ಷ ಸುಭಾಷ ಜಿ.ಢವಳೇಶ್ವರ ತಿಳಿಸಿದರು.

ಅವರು ಮೂಡಲಗಿ ಸಹಕಾರಿ ಬ್ಯಾಂಕನ ಸಭಭವನದಲ್ಲಿ ಬ್ಯಾಂಕ ಕಳೆದ ಆರ್ಥಿಕ ವರ್ಷದ ಅಂತ್ಯಕ್ಕೆ ಬ್ಯಾಂಕನ ವಹಿವಾಟಿನ ಮಾಹಿತಿ ನೀಡಿ ಮಾತನಾಡಿ, ಸದ್ಯ 2.71 ಕೋಟಿ ರೂ ಷೇರು ಬಂಡವಾಳ, 10.18 ಕೋಟಿ ರೂ ನಿಧಿಗಳು, 165.24 ಕೋಟಿ ರೂ ಠೇವು ಸಂಗ್ರಹಿಸಿ, 64.93 ಕೋಟಿ ರೂ ಸರ್ಕಾರಿ ಸ್ವಾಮ್ಯದ ವಿವಿಧ ಬ್ಯಾಂಕ್‌ಗಳಲ್ಲಿ ಹೂಡಿಕೆಗಳನ್ನು ಮಾಡಿ 182 ಕೋಟಿ ರೂ ದುಡಿಯುವ ಬಂಡವಾಳ ಹೊಂದಿ ವಿವಿಧ ರೀತಿಯ 93.23 ಕೋಟಿ ರೂ ಸಾಲ ನೀಡಲಾಗಿದೆ' ಎಂದರು.

ಶೇ.2.78 ಎನ್‌ಪಿಎ, ಶೇ.12.24 ಸಿಆರ್‌ಎಆ ಹೊಂದಿದೆ. ಬಾಂಕನ ಐದು ಶಾಖೆಗಳು ಲಾಭ ಮತ್ತು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಬ್ಯಾಂಕನ ಉಪಾಧ್ಯಕ್ಷ ನವೀನ ಬಡಗಣ್ಣವರ, ನಿರ್ದೇಶಕರಾದ ಕೆ.ವಿ. ದಂತಿ, ಎಸ್.ಎಂ. ಗಾಣಿಗೇರ, ಆರ್.ಬಿ. ನಿರ್ವಾಣಿ, ಆರ್.ಎಲ್. ವಾಲಿ, ಎಚ್.ಸಿ.ಅಂಗಡಿ, ಎಂ.ಕೆ.ತಾಂಬೂಳಿ, ರಾಚಪ್ಪ ಎಸ್.ಬೆಳಕೂಡ, ಜಿ.ಎಸ್.ಅಂಬಿ, ಪ್ರಭಾವತಿ ಮುಧೋಳ, ದಾನೇಶ್ವರಿ ಸತರಡ್ಡಿ, ಮಾಲಕ್ಕಾ ಪೋಳ, ಲೆಕ್ಕಪರಿಶೋಧಕ ಸೈದಪ್ಪ ಗದಾಡಿ, ಈರಪ್ಪ ಪಾಟೀಲ, ಪ್ರಧಾನ ವ್ಯವಸ್ಥಾಪಕ ಗೌಡಪ್ಪ ಬುದ್ದಿ ಇದ್ದರು.

# ಉತ್ತಮ ಆರೋಗ್ಯದಿಂದ ನೆಮ್ಮದಿಯ ಜೀವನದೊಂದಿಗೆ ಸಾಧಕರಾಗಲು ಸಾಧ್ಯ




**ಬೆಳಗಾವಿ ವಾರ್ತೆ ಗೋಕಾಕ:** ಉತ್ತಮ ಆರೋಗ್ಯದಿಂದ ನೆಮ್ಮದಿಯ ಜೀವನದೊಂದಿಗೆ ಸಾಧಕರಾಗಲು ಸಾಧ್ಯ ಎಂದು ಡಾ.ವಿಶ್ವನಾಥ ಶಿಂಧೋಳಿಮಠ ಹೇಳಿದರು.

ಅವರು, ಮಂಗಳವಾರದಂದು ನಗರದ ಶ್ರೀ ಸಿದ್ದಲಿಂಗೇಶ್ವರ ಬಿಸಿಎ ಕಾಲೇಜನಲ್ಲಿ ವಿಶ್ವ ಆರೋಗ್ಯ ದಿನ ನಿಮಿತ್ತ ಹಮ್ಮಿಕೊಂಡ ಆರೋಗ್ಯ ರಕ್ಷಣೆ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ಪೌಷ್ಠಿಕ ಆಹಾರ ಹಾಗೂ ವ್ಯಾಯಾಮಗಳಿಂದ ಆರೋಗ್ಯ ರಕ್ಷಣೆ ಸಾಧ್ಯ. ದೈಹಿಕ, ಮಾನಸಿಕವಾಗಿ ಸದರಢರಾಗಲು ಜನರೊಂದಿಗೆ ಉತ್ತಮ ಸಂಬಂಧದಿಂದ ಆರೋಗ್ಯ ಉತ್ತಮ ವಾಗಿರುತ್ತದೆ. ಸಂಭಂಧಿಕರಲ್ಲಿ ಮದುವೆಯಾದರೆ ಹುಟ್ಟುವ ಮಕ್ಕಳಲ್ಲಿ ಆರೋಗ್ಯ ಸಮಸ್ಯೆ ಕಾಡುತ್ತದೆ. ಬಾಲ್ಯ ವಿವಾಹ ತಡೆಗಟ್ಟಿ ರಕ್ತದಾನ ಮಾಡುವಂತೆ ಸಲಹೆ ನೀಡಿದರು.

ಆಡಳಿತಾಧಿಕಾರಿ ಅಡವೀಶ ಗವಿಮಠ, ಉಪನ್ಯಾಸಕಿ ಲತಾ ಪಾಟೀಲ ಇದ್ದರು.

# ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಿ



**ಬೆಳಗಾವಿ ವಾರ್ತೆ ವಿಜಯಪುರ:** ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಂಡು, ಜೀವನದಲ್ಲಿ ಸಾಧನೆ ಮಾಡುವಂತೆ ಅಧಿಕಾರಿಗಳು ಮಕ್ಕಳಿಗೆ ಪ್ರೇರೆಪಿಸುವ ಮೂಲಕ ಪೋಷಕರಿಗೆ ಅರಿವು ಮೂಡಿ ಸಬೇಕು ಎಂದು ಕರ್ನಾಟಕ ಅಲ್ಪಸಂಖ್ಯಾ ತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಅನುಷ್ಠಾನಗೊಳಿಸುವ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಕುರಿತು ಪೋಷಕರಿಗೆ ತಿಳಿ ಹೇಳುವ ಮೂಲಕ ಶಿಕ್ಷಣದ ಮಹತ್ವವನ್ನು ತಿಳಿಸಬೇಕು. ತನ್ಮೂಲಕ ಮಕ್ಕಳು ಉನ್ನತ ವಿದ್ಯಾಭ್ಯಾಸ ಹೊಂದಿ ರಾಷ್ಟ್ರದ ಅಭಿವೃದ್ಧಿಯಲ್ಲಿ ಕೊಡುಗೆ ನೀಡುವಂತಾಗಬೇಕು ಎಂದರು.

ಈ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು ಶ್ರಮಿಸಬೇಕು. ಎಲ್ಲ ಮಕ್ಕಳು ಶಾಲೆಗೆ ಸೇರಬೇಕು. ಮಾಹಿತಿಯನ್ನು ಒದಗಿಸುವಂತೆ ಸೂಚಿಸಿದರು.

ಶಾಲೆ ಬಿಟ್ಟ ಮಕ್ಕಳ ಮಾಹಿತಿಯನ್ನು ಸಂಗ್ರಹಿಸಿ ಮತ್ತೆ ಮರಳಿ ಶಾಲೆಗೆ ಕರೆ ತರಬೇಕು. ಶಿಕ್ಷಣದ ಮಹತ್ವದ ಕುರಿತು ಅಧಿಕಾರಿಗಳು ಮನವರಿಕೆ ಮಾಡಿ ಕೊಡಬೇಕು. ಸರ್ಕಾರ ಶಿಕ್ಷಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಈ ಸೌಲಭ್ಯಗಳನ್ನು ಒದಗಿಸಿ ಶಿಕ್ಷಣದಿಂದ ಯಾರು ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದರು.

ನಗರ ಹಾಗೂ ಗ್ರಾಮೀಣ ಭಾಗದ ಅಂಗನವಾಡಿಯಲ್ಲಿ ಕಲಿಯುವ ಮಕ್ಕಳ ಮಾಹಿತಿ ದತ್ತಾಂಶ ಒದಗಿಸಬೇಕು. ಶಿಕ್ಷಣದ ಮಹತ್ವ, ಶಾಲೆಬಿಟ್ಟ ಮಕ್ಕಳ ಕುರಿತಾಗಿ ಮಾಹಿತಿ ಮತ್ತು ಅನೇಕ ಅಭಿಯಾನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಉದ್ಯೋಗ ಮಾಹಿತಿ ವಿದ್ಯಾಭ್ಯಾಸಕ್ಕೆ ತಕ್ಕಂತೆ ತರಬೇತಿ, ವಿವಿಧ ಕೋರ್ಸ್ ಗಳಿಗೆ ಇರುವ ಮಾಹಿತಿಯನ್ನು ಆಯಾ ಕಾಲೇಜುಗಳಿಗೆ ಭೇಟಿ ನೀಡಿ ಮಾಹಿತಿಯನ್ನು ಅಧಿಕಾರಿಗಳು ಒದಗಿಸಬೇಕು. ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ವಿವಿಧ ಕೌಶಲ್ಯ ಹಾಗೂ ಮಾಹಿತಿ ಒದಗಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಕೊಳಚೆ ನಿರ್ಮೂಲನಾ ಮಂಡಳಿಯಿಂದ ಅರ್ಹ ಅಲ್ಪಸಂಖ್ಯಾತ ಸಮುದಾಯದ ಫಲಾನುಭವಿಗಳಿಗೆ ಮನೆ ಒದಗಿಸಲು, ಕಾಮಗಾರಿಗೆ ವೇಗ ನೀಡಿ, ಸರ್ಕಾರಿ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ಈ ಬಗ್ಗೆ ವರದಿಯನ್ನು ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ಅಲ್ಪಸಂಖ್ಯಾತರ ಸಮುದಾಯದವರ ಅಭಿವೃದ್ಧಿಗಾಗಿ ಸರ್ಕಾರ ಹಲವಾರು ಯೋಜನೆ ಜಾರಿಗೊಳಿಸಿ ಅನುಷ್ಠಾನ 'ಗೊಳಿಸುತ್ತಿದೆ. ಸಾಲ ಸೌಲಭ್ಯಕ್ಕಾಗಿ ಬ್ಯಾಂಕ್ ಗಳಿಗೆ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳಿಗೆ ವೃಥಾ ವಿಳಂಬ ಮಾಡದೇ ಅವರ ಅರ್ಜಿಗಳನ್ನು ತಕ್ಷಣ ವಿಲೇವಾರಿ ಮಾಡಬೇಕು ಎಂದರು.

ಅರ್ಜಿದಾರರಿಗೆ ಸಾಲ ಸೌಲಭ್ಯ ಒದಗಿಸಿಕೊಟ್ಟು ಆರ್ಥಿಕ ಸದೃಢತೆ ಹೊಂದಲು ಸ್ಪಂದಿಸಬೇಕು. ಈ ಕುರಿತು ಜಾಗೃತಿ ಮೂಡಿಸಬೇಕು ಎಂದೂ ಸಲಹೆ ಮಾಡಿದರು.

ಸಾಲ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಿದವರ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳದೇ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು ಎಂದು ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರಿಗೆ ಕಟ್ಟು ನಿಟ್ಟಾಗಿ ಸೂಚನೆ ನೀಡಿದರು.

ಬ್ಯಾಂಕ್ ಸಾಲಕ್ಕೆ ಅರ್ಜಿ ಸಲ್ಲಿಸಿದಾಗ, ದಾಖಲಾತಿಗಳು ಅಪೂರ್ಣ ಇದ್ದಲ್ಲಿ ತಿಳಿವಳಿಕೆ ನೀಡಿ, ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಿ, ಸರ್ಕಾರದ ಯೋಜನೆಗಳ ಸದುಪಯೋಗ ಪಡಿಸಿಕೊಳ್ಳಲು ಫಲಾನುಭವಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದರು.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಸ್ವಾವಲಂಬಿ ಟ್ಯಾಕ್ಸಿ, ಗೂಡ್ಸ್, ಆಟೋ ರಿಕ್ಷಾ ಯೋಜನೆಗಳು ಸೇರಿದಂತೆ ಅನೇಕ ಯೋಜನೆಗಳಿಗೆ ಅರ್ಜಿ ಸಲ್ಲಿಸಿರುವ ಅರ್ಹರೆಲ್ಲರ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳಬಾರದು ಎಂದು ಇದೇ ವೇಳೆ ಬ್ಯಾಂಕ್ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಅಲ್ಪಸಂಖ್ಯಾತರ ಸಮುದಾಯದವರಿಗೆ ಇರುವ ಸರ್ಕಾರದ ಯೋಜನೆಗಳು ಹಾಗೂ ಸೌಲಭ್ಯಗಳನ್ನು ಸಕಾಲಕ್ಕೆ ತಲುಪಿಸಬೇಕು. ಬದಲಿಗೆ ಫಲಾನುಭವಿಗಳಿಗೆ ಯೋಜನೆಗಳನ್ನು ತಲುಪಿಸುವಲ್ಲಿ ವಿಳಂಬ ಮಾಡಿದರೆ ಅಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಸಾಲ ಸೌಲಭ್ಯಕ್ಕಾಗಿ ಜಿಲ್ಲೆಯಲ್ಲಿ ಸ್ವೀಕರಿಸಿರುವ ಒಟ್ಟು ಅರ್ಜಿಗಳು, ಇತ್ಯರ್ಥಕ್ಕೆ ಬಾಕಿ ಇರುವ ಅರ್ಜಿಗಳ ಹಾಗೂ ಇತ್ಯರ್ಥಗೊಳ್ಳದಿರಲು ಕಾರಣ, ಎಷ್ಟು ಅವಧಿಯವರೆಗೆ ಅರ್ಜಿ ಮಂಜೂರಾತಿಗೆ ಬಾಕಿ ಉಳಿಸಿಕೊಂಡಿರುವ ಸಮಗ್ರ ವರದಿಯನ್ನು ಸಲ್ಲಿಸುವಂತೆ ಇದೇ ವೇಳೆ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚಿಸಿದರು.

ಯಾವುದೇ ನಿರ್ಲಕ್ಷ್ಯ ವಹಿಸದೇ ವಿಲೇವಾರಿಗೆ ಕ್ರಮ ವಹಿಸಬೇಕು. ಸಭೆಗೆ ಮಾಹಿತಿಯೊಂದಿಗೆ ಆಗಮಿಸಬೇಕು.

ಅಧಿಕಾರಿಗಳು ಕೇಳುವ ಮಾಹಿತಿ ನೀಡುವಲ್ಲಿ ನಿರ್ಲಕ್ಷ್ಯ ಸಲ್ಲದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಅಲ್ಪಸಂಖ್ಯಾತರ ಸಮುದಾಯದವರಿಗೆ ಸರ್ಕಾರ ಜಾರಿಗೊಳಿಸಿದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳ ತಲುಪಿಸಬೇಕು ಎಂದರು.

ಸರ್ಕಾರ ಜಾರಿಗೊಳಿಸಿರುವ ಯೋಜನೆಗಳನ್ನು ಸದುಪಯೋಗ ಪಡೆಸಿಕೊಂಡು ಅಲ್ಪಸಂಖ್ಯಾತರು ಆರ್ಥಿಕವಾಗಿ ಹಾಗೂ ಸ್ವಾವಲಂಬನೆ ಬದುಕು ಕಟ್ಟಿಕೊಳ್ಳುವಂತೆ ಕ್ರಮ ಕೈಗೊಳ್ಳಬೇಕು ಎಂದರು.

ಶಿಕ್ಷಣಕ್ಕಾಗಿ ಒತ್ತು ನೀಡುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿನ ಅಲ್ಪಸಂಖ್ಯಾತ ಸಮುದಾಯದ ನಾಲ್ಕು ವರ್ಷ ವಯೋಮಾನದ ಮಕ್ಕಳು ಅಂಗನವಾಡಿ ಹಾಗೂ ನರ್ಸರಿ ಶಾಲೆಗೆ ದಾಖಲಾತಿಯಾಗಿರುವ ಹಾಗೂ ಆರು ವರ್ಷದ ಮಗು ಪ್ರಾಥಮಿಕ ಶಾಲಾ ವಿದ್ಯಾಭ್ಯಾಸದಲ್ಲಿ ಒಂದನೇ ತರಗತಿಯಲ್ಲಿ ಕಲಿಯುತ್ತಿರುವ ಮಕ್ಕಳ ಕುರಿತ ಸಮಗ್ರ ಮಾಹಿತಿಯನ್ನು ಕ್ರೋಢೀಕರಿಸಿ ಒದಗಿಸುವಂತೆ ಶಾಲಾ ಶಿಕ್ಷಣ ಇಲಾಖೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಕುರಿತು ಅಂಗನವಾಡಿಯಲ್ಲಿ ಓದುತ್ತಿರುವ ಮಕ್ಕಳ ಮಾಹಿತಿ ಮತ್ತು ಪ್ರಾಥಮಿಕ ಶಾಲೆಯಲ್ಲಿ ಓದುತ್ತಿರುವ ಮಕ್ಕಳ ಮಾಹಿತಿಯನ್ನು ಒದಗಿಸುವಂತೆಯೂ ಸೂಚಿಸಿದರು.

ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಮಾತನಾಡಿ, ಯಾವುದೇ ಫಲಾನುಭವಿಗಳ ಅರ್ಜಿಗಳು ಬ್ಯಾಂಕ್ ಗಳಲ್ಲಿ ಬಾಕಿ ಉಳಿಯದಂತೆ ಕ್ರಮ ಕೈಗೊಳ್ಳಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಣಾಧಿಕಾರಿ ರಿಷಿ ಆನಂದ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದೊಡ್ಡಿ, ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ ಸೇರಿದಂತೆ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ ಜಫಾರಿ, ಜಿಲ್ಲಾ ಮಟ್ಟದ ಸಮಿತಿ ಸದಸ್ಯರಾದ ಸೈಯದ ನೂರುಲ್ ಹಸನ್ ಎಸ್.ಬೀಳಗಿಪೀರ,ಬಸೀರ ಅಹ್ಮದ ರಿಸಲ್ದಾರ, ಎಸ್.ಎಸ್. ತಜಂತ್ರಕ, ನೆಲ್ಸನ್ ನಾರ್ಮನ್ ಐರ್ಘಾಕ್, ಜ್ಯೋತಿಂದ್ರ ಆಯಿತವಾಡ, ಬಂದೇನವಾಜ ಮುಲ್ಲಾ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಏ.10 ರಿಂದ ಐದು ದಿನಗಳ ಕಾಲ ಬುದ್ಧ, ಬಸವ, ಬಾಬಾಸಾಹೇಬ ಅಂಬೇಡ್ಕರ್ ಪುಸ್ತಕ ಮೇಳ: ಸೂಳಿಭಾವಿ



**ಬೆಳಗಾವಿ ವಾರ್ತೆ ವಿಜಯಪುರ:** ಏ.10 ರಿಂದ ಐದು ದಿನಗಳ ಕಾಲ ಬುದ್ಧ, ಬಸವ ಬಾಬಾ ಸಾಹೇಬ ಅಂಬೇಡ್ಕರ್ ಪುಸ್ತಕ ಮೇಳವನ್ನು ಪ್ರಪ್ರಥಮ ಬಾರಿಗೆ ವಿಜಯಪುರದ ದರಬಾರ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗಿದ್ದು, ಮೇಳಕ್ಕೆ ಸಕಲ ಸಿದ್ಧತೆಗಳನ್ನು ಭರದಿಂದ ಕೈಗೊಳ್ಳಲಾಗುತ್ತಿದೆ ಎಂದು ಲಡಾಯಿ ಪ್ರಕಾಶನದ ಮುಖ್ಯಸ್ಥ, ಪ್ರಗತಿಪರ ಚಿಂತಕ ಬಸವರಾಜ ಸೂಳಿಭಾವಿ ಹೇಳಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇ ಸಾಹಿತ್ಯ ಮೇಳ ವಿಜಯಪುರ ಬಳಗ ಹಾಗೂ ದಲಿತ, ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಈ ಮೇಳ ಆಯೋಜಿಸಲಾಗಿದ್ದು, ಸ್ವರಚಿತ ಪುಸ್ತಕಗಳಗಳೊಂದಿಗೆ ಸಾಹಿತಿಗಳ ಜಾಥಾ ಅಪೂರ್ವ ರೀತಿಯಲ್ಲಿ ನಡೆಯಲಿದ್ದು,ಸಾಹಿತಿಗಳೇ ಈ ಜಾಥಾಕ್ಕೆ ಚಾಲನೆ ನೀಡಲಿದ್ದಾರೆ.

ಏ.10 ರಂದು ಮಧ್ಯಾಹ್ನ 12 ಕ್ಕೆ ಡಿಎಸ್‌ಎಸ್ ರಾಜ್ಯ ಸಂಚಾಲಕ ಮಾವಳ್ಳಿ ಶಂಕರ ಪುಸ್ತಕ ಮೇಳಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಲಿದ್ದಾರೆ. ಬೆಳಗಾವಿ ಪ್ರಾದೇಶಿಕ ಆಯುಕ್ತೆ ಕೆ.ಎಂ. ಜಾನಕಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಂಬೈನ ಖ್ಯಾತ ಲೇಖಕ ಜಿ.ವಿ. ಪವಾರ ದಿಕ್ಸೂಚಿ ಭಾಷಣ ಮಂಡಿಸಲಿದ್ದಾರೆ ಎಂದರು.

ಅದೇ ದಿನ ಮಧ್ಯಾಹ್ನ 3 ಕ್ಕೆ ಸಾಮಾಜಿಕ ಬದ್ಧತೆ – ಪತ್ರಕರ್ತನಾಗಿ ಅನುಭವಗಳು ಎಂಬ ವಿಚಾರಗೋಷ್ಠಿ ನಡೆಯಲಿದ್ದು, ಹಿರಿಯ ಪತ್ರಕರ್ತರಾದ ಬಿ.ಎಂ. ಹನೀಫ್, ಚಂದ್ರಕಾಂತ ವಡ್ಡು ವಿಚಾರ ಮಂಡಿಸಲಿದ್ದು, ಹಿರಿಯ ಪತ್ರಕರ್ತ ರಫೀ ಭಂಡಾರಿ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಜೆ 5 ಕ್ಕೆ ನನ್ನ ನೆಚ್ಚಿನ ಪುಸ್ತಕ □ ವಿದ್ಯಾರ್ಥಿಗಳ ಮಾತು ಎಂಬ ಸಂವಾದ, ನಂತರ ಸಂಜೆ 6 ಕ್ಕೆ ಕವಿಗೋಷ್ಠಿ, ಸಂಜೆ 7 ಕ್ಕೆ ಬಂಜಾರಾ ನೃತ್ಯ ನಡೆಯಲಿದೆ.

ಅದೇ ದಿನ ರಾತ್ರಿ 8 ಕ್ಕೆ ಗಣೇಶ ಕಾಂಬಳೆ □ ರಮೇಶ ನಾಯಕ ಅವರಿಂದ ಪವಾಡ ಬಯಲು ಕಾರ್ಯಕ್ರಮ ನಡೆಯಲಿದೆ.

11 ರಂದು ಶಿಕ್ಷಕ ದಂಪತಿಗಳ ಮೆರವಣಿಗೆ ಎಂಬ ವಿನೂತನ ಕಾರ್ಯಕ್ರಮ ನಡೆಯಲಿದ್ದು, ಸಾವಿತ್ರಿಬಾಯಿ ಫುಲೆ ಮಾರ್ಗದಿಂದ ಪುಸ್ತಕ ಮೇಳದ ಸ್ಥಳದವರೆಗೆ ಈ ಮೆರವಣಿಗೆ ನಡೆಯಲಿದೆ, ಮಧ್ಯಾಹ್ನ 12 ಕ್ಕೆ ಖ್ಯಾತ ಚಿಂತಕಿ ಡಾ.ಮೀನಾಕ್ಷಿ ಬಾಳಿ ದಿಕ್ಸೂಚಿ ಭಾಷಣ ಮಂಡಲಿಸದ್ದಾರೆ. ಸಂಜೆ 4 ಕ್ಕೆ ಲೇಖಕರೊಂದಿಗೆ ಸಂವಾದ ನಡೆಯಲಿದೆ. ಸಂಜೆ 6 ಕ್ಕೆ ಕವಿಗೋಷ್ಠಿ ನಡೆಯಲಿದೆ.

ಏ.12 ರಂದು ಬಸವಾದಿ ಶರಣರ ವಚನಗಳ ಪವಿತ್ರ ಕಟ್ಟುಗಳ ಮೆರವಣಿಗೆ ನಡೆಯಲಿದೆ. ನಂತರ ನಡೆಯಲಿರುವ ಉಪನ್ಯಾಸ ಕಾರ್ಯಕ್ರಮದಲ್ಲಿ ಖ್ಯಾತ ಚಿಂತಕಿ ಡಾ.ಎಚ್.ಅನುಪಮಾ ವಿಶೇಷ ಉಪನ್ಯಾಸ ನೀಡಲಿದ್ದಾರೆ. ನಂತರ ಮುದ್ರಣ ಗುಮ್ಮಟ ಎಂಬ ಪುಸ್ತಕ ಬಿಡುಗಡೆ ಹಾಗೂ ಪ್ರಶಸ್ತಿ ಪ್ರದಾನ, ಛಾಯಾಚಿತ್ರಗಳ ಪ್ರದರ್ಶನ ನಡೆಯಲಿದೆ. ಏ.13 ರಂದು ಕಾಕಾ ಕಾರಖಾನೀಸರ ಸ್ಮರಣೆ ನಡೆಯಲಿದ್ದು, ಡಾ.ಕೃಷ್ಣ ಕೊಲ್ಹಾರ ಕುಲಕರ್ಣಿ ಉಪನ್ಯಾಸ ಮಂಡಿಸಲಿದ್ದಾರೆ.

ಏ.14 ರಂದು ಸಂವಿಧಾನ ಶಿಲ್ಪಿ ಡಾ.ಬಿ.ಅರ್. ಅಂಬೇಡ್ಕರ ಜಯಂತೋತ್ಸವ ನಡೆಯಲಿದ್ದು, ಖ್ಯಾತ ಚಿಂತಕ ಶಿವಸುಂದರ ಪ್ರಧಾನ ಭಾಷಣ ಮಂಡಿಸಲಿದ್ದಾರೆ ಎಂದರು.

ಪುನ: ಮಾನವೀಯತೆಯ ನೆಲೆಗಟ್ಟಿನಲ್ಲಿ ಮನುಕುಲವನ್ನು ಮರಳಿ ತರುವ ನಿಟ್ಟಿನಲ್ಲಿ ಪುಸ್ತಕ ಜಗತ್ತು ಕಾರ್ಯೋನ್ಮುಖವಾಗುವ ವೇದಿಕೆಯಾಗಿ ಈ ಮೇಳ ಆಯೋಜಿಸಲಾಗುತ್ತಿದೆ. ಇದು ಒಂದು ಸಾಹಿತ್ಯಿಕ ಜೊತೆಗೆ ಸಾಂಸ್ಕೃತಿಕ ಮೇಳವೂ ಹೌದು. ಜ್ಞಾನ ಕೊರತೆಯನ್ನೂ ಆಧುನಿಕ ಭಗೀರಥರು ನೀಗಿಸಲಿ

ಜಲ ನೀಡುವ ಮೂಲಕ ಅಪೂರ್ವ ಕಾರ್ಯ ಮಾಡಿರುವ ಆಧುನಿಕ ಭಗೀರಥರೆನಿಸಿಕೊಂಡಿರುವ ಸಚಿವ ಡಾ.ಎಂ.ಬಿ. ಪಾಟೀಲರು ಜಿಲ್ಲೆಯ ಜ್ಞಾನದ ಕೊರತೆಯನ್ನೂ ಸಹ ನೀಗಿಸುವ ಭಗೀರಥರಾಗಲಿ, ಈ ಕಾರ್ಯವನ್ನು ಅವರು ಕೈಗೊಳ್ಳುತ್ತಾರೆ ಎನ್ನುವ ವಿಶ್ವಾಸವಿದೆ ಎಂದು ಸೂಳಿಭಾವಿ ಆಶಯ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಪ್ರತಿ ಗ್ರಾಮದಲ್ಲಿ ಗ್ರಂಥಾಲಯ ಇರಬೇಕು. ಗ್ರಂಥಾಲಯ ಇಲ್ಲದೇ ಇರುವ ಗ್ರಾಮ ಇರಲೇಬಾರದು. ಈ ನಿಟ್ಟಿನಲ್ಲಿ ನಾವು ಆಶಯಪೂರ್ವಕ ಹೆಜ್ಜೆಯನ್ನು ಇರಿಸುತ್ತಿದ್ದೇವೆ ಎಂದರು.

ಪ್ರಮುಖರಾದ ರಾಜಶೇಖರ ಯಡಹಳ್ಳಿ, ಅನೀಲ್ ಹೊಸಮನಿ, ಡಾ.ದೊಡ್ಡಣ್ಣ ಭಜಂತ್ರಿ ಮೊದಲಾದವರು ಉಪಸ್ಥಿತರಿದ್ದರು.

# ಅಲರ್ಜಿ ಕ್ಷೇತ್ರದ ಹೊಸ ಒಳನೋಟಗಳು: ವೈದ್ಯಕೀಯ ಕಾರ್ಯಗಾರ



ವಿಜಯಪುರ: ನಗರದ ಪ್ರತಿಷ್ಠಿತ ಬಿ. ಎಲ್. ಡಿ. ಇ ಡೀಮ್ಡ್ ವಿಶ್ವವಿದ್ಯಾಲಯ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದಲ್ಲಿ ಇತ್ತೀಚೆಗೆ ಕಿವಿ–ಮೂಗು–ಗಂಟಲು ವಿಭಾಗದಿಂದ ಅಲರ್ಜಿ ಕ್ಷೇತ್ರದ ಹೊಸ ಒಳನೋಟಗಳು ಕುರಿತು ಮೇಲೆ ನಿರಂತರ ವೈದ್ಯಕೀಯ ಶಿಕ್ಷಣ (ಅಒಇ) ಹಾಗೂ ಕಾರ್ಯಾಗಾರ ನಡೆಯಿತು.

ಈ ಕಾರ್ಯಾಗಾರವನ್ನು ಉದ್ಘಾಟಿಸಿದ ಬೆಂಗಳೂರಿನ ಅಲರ್ಜಿ ತಜ್ಞ ಡಾ. ಗಾಯತ್ರಿ ಪಂಡಿತ, ಡಾ. ಶೃತಿ ಮಂಜುನಾಥ ಮತ್ತು ಹುಬ್ಬಳ್ಳಿಯ ಚಿಕ್ಕಮಕ್ಕಳ ತಜ್ಞ ಡಾ. ಬಾಹುಬಲಿ ಇಂಗಳೆ ಅವರು, ಅಲರ್ಜಿ ಮತ್ತು ಇಮ್ಯುನಾಲಜಿ ಕ್ಷೇತ್ರದಲ್ಲಿನ ಹೊಸ ಹೊಸ ಆವಿಷ್ಕಾರಗಳ ಕುರಿತು ಮತ್ತು ಅಲರ್ಜಿ ಸಂಬಂಧಿತ ರೋಗಗಳ ಗುರುತಿಸುವಿಕೆ ಮತ್ತು ಚಿಕಿತ್ಸೆಯ ಬಗ್ಗೆ ಉಪನ್ಯಾಸ ನೀಡಿದರು.

ನಂತರ ಬಿ.ಎಲ್.ಡಿ.ಇ ಆಸ್ಪತ್ರೆ ಪಲ್ಮನಾಲಜಿಸ್ಟ್ ವಿಭಾಗದ ಡಾ. ಕೀರ್ತಿವರ್ಧನ್ ಕುಲಕರ್ಣಿ ಅಸ್ತಮಾ ಕುರಿತು ಮಾತನಾಡಿದರು.

ಈ ಕಾರ್ಯಾಗಾರದಿಂದ ವೈದ್ಯರಿಗೆ ರೋಗಿಗಳಿಗೆ ಚಿಕಿತ್ಸೆ ನೀಡಲು ಅನಕೂಲವಾಗಲೆಂದು ಸೇರಿದ ವೈದ್ಯರಿಗೆಲ್ಲರಿಗೂ ಅಲರ್ಜಿ ಚರ್ಮದ ಪರೀಕ್ಷೆ (ಖಏಖಓ ಕಖಖಅಏ ಖಇಖಖ) ಮಾಡಿಸಲಾಯಿತು. 60 ಜನ ಈ ಪರೀಕ್ಷೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಡೀಮ್ಡ್ ವಿವಿ ಕುಲಪತಿ ಡಾ. ಅರುಣ ಇನಾಮದಾರ, ಪ್ರಾಚಾರ್ಯೆ ಡಾ. ತೇಜಸ್ವಿನಿ ವಲ್ಲಭ, ಹಿರಿಯ ಉಪಪ್ರಾಚಾರ್ಯ ಡಾ. ವಿಜಯಕುಮಾರ ಕಲ್ಯಾಣಪ್ಪಗೋಳ, ವೈದ್ಯಕೀಯ ಅಧೀಕ್ಷಕ ಡಾ. ಎಸ್. ಎನ್. ಬೆಂಟೂರ, ಡಾ. ಎಚ್. ಟಿ. ಲತಾದೇವಿ ಉಪಸ್ಥಿತರಿದ್ದರು.

120 ಕ್ಕೂ ಹೆಚ್ಚು ಸ್ನಾತಕೋತ್ತರ ವಿದ್ಯಾರ್ಥಿಗಳು, ವೈದ್ಯರು ಈ ಕಾರ್ಯಗಾರದಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳಿಗೆ ಹೊಸ ಆವಿಷ್ಕಾರ ತಿಳಿಸುವುದು ಬಹು ಮುಖ್ಯ: ಪ್ರೊ. ಅರುಣ ಇನಾಮದಾರ

**ಬೆಳಗಾವಿ ವಾರ್ತೆ ವಿಜಯಪುರ:** ವಿದ್ಯಾರ್ಥಿಗಳಿಗೆ ಹೊಸ ತಂತ್ರಜ್ಞಾನಗಳ ಅವಿಷ್ಕಾರಗಳ ಬಗ್ಗೆ ತಿಳಿಸುವುದು ಬಹು ಮುಖ್ಯವಾಗಿರುತ್ತದೆ. "ಕಾಂಪಿಟೇಷನಲ್ ಬಯಾಲಜಿ ಮತ್ತು ಮಾಲಿಕ್ಯುಲರ್ ಬಯಾಲಜಿ ಟೆಕ್ನಿಕ್ಸ್" ಈ ತಂತ್ರಜ್ಞಾನಗಳು ಕೃಷಿ ಸಂಶೋಧನೆ, ವೈದ್ಯಕಿಯ ಸಂಶೋಧನೆಯಲ್ಲಿ ಬಹು ಮುಖ್ಯವಾಗಿರುತ್ತದೆ ಎಂದು ಬಿ.ಎಲ್.ಡಿ.ಇ, ವಿಶ್ವವಿದ್ಯಾಲಯದ, ಕುಲಪತಿ ಪ್ರೊ.ಅರುಣ ಇನಾಮದಾರ ಹೇಳಿದರು.

ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ, ಜೈವಿಕ ಮಾಹಿತಿ ಅಧ್ಯಯನ ಹಾಗೂ ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗದ ಸಹಯೋಗದಲ್ಲಿ ವಿಷನ್ ಗ್ರೂಪ್ ಆಪ್ ವಿಜ್ಞಾನ ಮತ್ತು ತಂತ್ರಜ್ಞಾ ದಾರ್ಶನಿಕ ಇವರ ಪ್ರಾಯೋಜತ್ವ ಅಡಿಯಲ್ಲಿ 5 ದಿನಗಳ "ಫ್ಯಾಕಲ್ಟಿ ಡೆವಲಪ್ಮೆಂಟ್ ಪ್ರೊಗ್ರಾಮ್ ಇನ್ ಕಾಂಪಿಟೇಷನಲ್ ಬಯಾಲಜಿ ಮತ್ತು ಮಾಲಿಕ್ಯುಲರ್ ಬಯಾಲಜಿ ಟೆಕ್ನಿಕ್ಸ್" ಎಂಬ ವಿಷಯದ ಮೇಲೆ ಆಯೋಜಿಸಲಾಗಿದ್ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದ ಅವರು ಶಿಬಿರಾರ್ಥಿಗಳಿಗೆ ಎಫ್‌ಡಿಪಿ ಕಾರ್ಯಕ್ರಮದ ಅನುಕೂಲತೆಗಳು ಮತ್ತು ವುಗಳನ್ನು ಹೇಗೆ ಸಮರ್ಪಕವಾಗಿ ಉಪಯೋಗಿಸಿಕೊಳ್ಳಬೇಕು ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ಇವತ್ತಿನ ಎಐ ತಂತ್ರಜ್ಞಾನದ ಯುಗದಲ್ಲಿ ಶಿಕ್ಷಕರು ವಿವಿಧ ರೀತಿಯಲ್ಲಿ ವಿಷಯಗಳನ್ನು ವಿಶ್ಲೇಷಣೆ ಮಾಡಿ ವಿದ್ಯಾರ್ಥಿಗಳಿಗೆ ತಿಳಿಸಲು ಪ್ರಯತ್ನಿಸಬೇಕು. ಶಿಕ್ಷಕರು ದಿನನಿತ್ಯ ಹೊಸತನವನ್ನು ಕಲಿಯಲು ಪ್ರಯತ್ನಿಸಬೇಕು ಹಾಗೂ ವೃತ್ತಿಪರತೆಯನ್ನು ಮರೆಯಬಾರದು ಎಂದು ಸಲಹೆ ಮಾಡಿದರು.


ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ.ವಿಜಯಾ ಬಿ. ಕೋರಿಶೆಟ್ಟಿ ಅವರು ಮಾತನಾಡಿ, ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಕರು ಹೊಸ



ಅವಿಷ್ಕಾರಗಳ ಬಗ್ಗೆ ತಿಳಿದುಕೊಳ್ಳುವುದು ಅತ್ಯಅವಶ್ಯವಾಗಿರುತ್ತದೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಸಂಶೋಧನೆಯಲ್ಲಿ ತೊಡಗಿಸಿಕೋಳ್ಳಲು ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಯೋಜಕ ಡಾ.ಬಾಬು ಆರ್. ಎಲ್. ಸ್ವಾಗತಿದರು, ಡಾ.ಜಾಯ್ ಹೊಸಕೇರಿ ವಂದಿಸಿದರು. ವಿದ್ಯಾರ್ಥಿನಿ ಸೂರ್ಯವಂಶಿ ನಿರೂಪಿಸಿದರು. ಹಾಗೂ ವಿವಿ ಪ್ರಾಧ್ಯಾಪಕರು ಹಾಗೂ ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

# ಆರ್ಥಿಕ ಬಿಕ್ಕಟ್ಟು ನಿರ್ವಹಣೆ ಮತ್ತು ಬಾಕಿ ಬಿಲ್ ಪಾವತಿಗೆ ಆಗ್ರಹಿಸಿ ಮನವಿ




ಮೂಡಲಗಿ: ವಿವಿಧ ಬೇಡಿಕೆ ಈಡೇರಿಕ್ಕೆಗಾಗಿ ಆಗ್ರಹಿಸಿ ಮೂಡಲಗಿ ತಾಲೂಕಾ ಕರ್ನಾಟಕ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಸೋಮವಾರ ಮೂಡಲಗಿ ತಾಲೂಕು ಪಂಚಾಯತಿಯ ಸಹಾಯಕ ನಿರ್ದೇಶಕ ಎಸ್.ಎಸ್.ರೋಡನ್ನವರ ಮುಖಾಂತರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಿದರು.

**ಬೆಳಗಾವಿ ವಾರ್ತೆ ಮೂಡಲಗಿ:** ರಾಜ್ಯದ ಗ್ರಾಮ ಪಂಚಾಯಿತಿಗಳ ಆರ್ಥಿಕ ಬಿಕ್ಕಟ್ಟು ನಿರ್ವಹಣೆ, ಬಾಕಿ ಬಿಲ್ ಪಾವತಿಗೆ ಕೆ.ಟಿ.ಪಿ.ಪಿ ಕಾಯ್ದೆಯಿಂದ ವಿಶೇಷ ವಿನಾಯಿತಿ ಮತ್ತು ಪಿಡಿಒ ಅವರು ಮೇಲಿನ ಒತ್ತಡ/ಬೆದರಿಕೆ ತಡೆಗಟ್ಟಲು ತುರ್ತು ಮಾರ್ಗಸೂಚಿ ಹೊರಡಿಸುವಂತೆ ಆಗ್ರಹಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಮೂಡಲಗಿ ತಾಲೂಕಾ ಕರ್ನಾಟಕ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಸೋಮವಾರ ಮೂಡಲಗಿ ತಾಲೂಕು ಪಂಚಾಯತಿಯ ಸಹಾಯಕ ನಿರ್ದೇಶಕ ಎಸ್.ಎಸ್. ರೋಡನ್ನವರ ಮುಖಾಂತರ ಮನವಿ ಸಲ್ಲಿಸಿದರು.

ರಾಜ್ಯದ ಗ್ರಾಮೀಣಾಭಿವೃದ್ಧಿ ವ್ಯವಸ್ಥೆಯ ಬೆನ್ನೆಲುಬಾಗಿರುವ ಗ್ರಾಮ ಪಂಚಾಯಿತಿಗಳು ಪ್ರಸ್ತುತ ಹಿಂದೆಂದೂ ಕಾಣದಂತಹ ಆರ್ಥಿಕ ಮತ್ತು ಆಡಳಿತಾತ್ಮಕ ಬಿಕ್ಕಟ್ಟನ್ನು ಎದುರಿಸುತ್ತಿವೆ. ರಾಜ್ಯದ 5,950 ಗ್ರಾಮ ಪಂಚಾಯಿತಿಗಳ ಕಾರ್ಯನಿರ್ವಹಣೆಯು ಅನುದಾನದ ಕೊರತೆಯಿಂದಾಗಿ ಸಂಪೂರ್ಣ ಸ್ಥಗಿತಗೊಳ್ಳುವ ಹಂತಕ್ಕೆ ತಲುಪಿದೆ ಎಂದು ರಾಜ್ಯದ ಪಿಡಿಒ ಅವರು ಗೂಗಲ್ ಮೀಟ್ ಸಭೆಯಲ್ಲಿ ಅಳಲು ತೋಡಿಕೊಂಡಿದ್ದು.

15ನೇ ಹಣಕಾಸು ಆಯೋಗದ ಅನುದಾನದ ಕೊರತೆ ಮತ್ತು ಆರ್ಥಿಕ ಸ್ಥಗಿತ: ಗ್ರಾಮ ಪಂಚಾಯಿತಿಗಳು ತಮ್ಮ ದೈನಂದಿನ ಅನಿವಾರ್ಯ ವೆಚ್ಚಗಳಿಗಾಗಿ 15ನೇ ಹಣಕಾಸು ಯೋಜನೆಯಡಿಯ 'ಟೈಡ್' ಮತ್ತು 'ಅನ್-ಟೈಡ್' ಅನುದಾನವನ್ನೇ ಅವಲಂಬಿಸಿವೆ. ಕಳೆದ ಒಂದು ವರ್ಷದಿಂದ ಈ ಅನುದಾನವು ಸಮಪರ್ಕವಾಗಿ ಬಿಡುಗಡೆಯಾಗದ ಕಾರಣ, ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಮೋಟಾರ್ ರಿಪೇರಿ, ಪೈಪ್‌ಲೈನ್ ಅಳವಡಿಕೆ ಮತ್ತು ಬೀದಿ ದೀಪಗಳ ನಿರ್ವಹಣೆಗೆ ಹಣವಿಲ್ಲದೆ ಆಡಳಿತ ಯಂತ್ರ ಸ್ತಬ್ಧಗೊಂಡಿದೆ.

**ಬೃಹತ್ ಮೊತ್ತದ ಬಾಕಿ ಮತ್ತು ಏಜೆನ್ಸಿಗಳ ಅಸಹಕಾರ:** ರಾಜ್ಯದ ಸುಮಾರು ಶೇ.70 ಗ್ರಾಮ ಪಂಚಾಯಿತಿಗಳು ಕಳೆದ ಒಂದು ವರ್ಷದಿಂದ ಕನಿಷ್ಠ 5 ಲಕ್ಷದಿಂದ 20 ಲಕ್ಷ ರೂಪಾಯಿಗಳವರೆಗೆ ಬಾಕಿ ಬಿಲ್‌ಗಳನ್ನು ಹೊಂದಿವೆ. ಸಾರ್ವಜನಿಕ ಹಿತದೃಷ್ಟಿಯಿಂದ ಪಿಡಿಒ ಅವರು ಸ್ಥಳೀಯ ಏಜೆನ್ಸಿಗಳಿಂದ ಸಾಲದ ರೂಪದಲ್ಲಿ ಸಾಮಗ್ರಿಗಳನ್ನು ಪಡೆದು ಸೇವೆ ನೀಡಿದ್ದಾರೆ. ಆದರೆ ಈಗ ಹಳೆಯ ಬಾಕಿ ಪಾವತಿಯಾಗದ ಕಾರಣ, ಯಾವುದೇ ಸರಬರಾಜು ಏಜೆನ್ಸಿಗಳು ಹೊಸ ಸಾಮಗ್ರಿಗಳನ್ನು ನೀಡಲು ಮುಂದೆ ಬರುತ್ತಿಲ್ಲ. ಇದು ಹಳ್ಳಿಗಳಲ್ಲಿ ಮೂಲಭೂತ ಸೌಕರ್ಯಗಳ ನಿರ್ವಹಣೆಗೆ ದೊಡ್ಡ ಅಡ್ಡಿಯಾಗಿದೆ.

ಸಾರ್ವಜನಿಕರ ಆಕ್ರೋಶ ಮತ್ತು ಪಿಡಿಒ ಅವರು ಮೇಲಿನ ಒತ್ತಡ/ಬೆದರಿಕೆ: ಕುಡಿಯುವ ನೀರು ಮತ್ತು ಬೀದಿ ದೀಪದಂತಹ ಸಮಸ್ಯೆಗಳು ತಲೆದೂರಿದಾಗ, ಅನುದಾನವಿಲ್ಲದ ಕಾರಣ ಕೆಲಸ ವಿಳಂಬವಾಗುತ್ತಿದೆ. ಇದರಿಂದಾಗಿ ಗ್ರಾಮೀಣ ಸಾರ್ವಜನಿಕರು ನೇರವಾಗಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಮೇಲೆ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಹಲವು ಕಡೆಗಳಲ್ಲಿ ಬಿಲ್ ಪಾವತಿಸುವಂತೆ ಪಿಡಿಒ ಅವರ ಮೇಲೆ ಪಟ್ಟಭದ್ರ ಹಿತಾಸಕ್ತಿಗಳು ಮತ್ತು ಏಜೆನ್ಸಿಗಳು ತೀವ್ರ ಒತ್ತಡ ಹಾಗೂ ಬೆದರಿಕೆಗಳನ್ನು ಹಾಕುತ್ತಿರುವುದು ಅಧಿಕಾರಿಗಳ ಮಾನಸಿಕ ನೆಮ್ಮದಿಯನ್ನು ಕೆಡಿಸಿದೆ. ಭಯದ ವಾತಾವರಣದಲ್ಲಿ ಕರ್ತವ್ಯ ನಿರ್ವಹಿಸುವುದು ಅಸಾಧ್ಯವಾಗಿದೆ.

ಕೆ.ಟಿ.ಪಿ.ಪಿ ಕಾಯ್ದೆ ಉಲ್ಲಂಘನೆಯ ಭೀತಿ ಮತ್ತು ಕಾನೂನಾತ್ಮಕ ಅಡ್ಡಿ: ಅನುದಾನ ಬಿಡುಗಡೆಯಾದ ಸಂದರ್ಭದಲ್ಲಿ, ಕಳೆದ ಒಂದು ವರ್ಷದ ಎಲ್ಲಾ ಬಾಕಿಗಳನ್ನು ಒಟ್ಟಾಗಿ ಪಾವತಿಸುವುದು ಅನಿವಾರ್ಯ. ಇಂತಹ ಸಂದರ್ಭದಲ್ಲಿ ಕೆ.ಟಿ.ಪಿ.ಪಿ ಕಾಯ್ದೆಯ ಅಡಿಯಲ್ಲಿ "ಒಂದೇ ಬಾರಿಗೆ ಹೆಚ್ಚಿನ ಮೊತ್ತದ ಪಾವತಿ" ಎಂಬ ತಾಂತ್ರಿಕ ಕಾರಣ ನೀಡಿ ಪಿಡಿಒ ಅವರು ಮೇಲೆ ದೂರು ದಾಖಲಾಗುವ ಅಥವಾ ಆಡಿಟ್ ಆಕ್ಷೇಪಣೆ ಬರುವ ಸಾಧ್ಯತೆ ದಟ್ಟವಾಗಿದೆ. ಸರ್ಕಾರದ ವಿಳಂಬ ನೀತಿಯಿಂದಾಗಿ ಅಧಿಕಾರಿಗಳು ಕಾನೂನು ಕ್ರಮಕ್ಕೆ ಗುರಿಯಾಗುವ ಆತಂಕದಲ್ಲಿದ್ದಾರೆ.

ತುರ್ತು ಬೇಡಿಕೆಗಳು: ಬಾಕಿ ಇರುವ ಕುಡಿಯುವ ನೀರಿನ ಸಾಮಗ್ರಿಗಳ ವೆಚ್ಚ ಮತ್ತು ಸ್ವಚ್ಛತಾ ಬಿಲ್ ಭರಿಸಲು ತಕ್ಷಣವೇ ಪರ್ಯಾಯ ವಿಶೇಷ ಅನುದಾನವನ್ನು ಬಿಡುಗಡೆ ಮಾಡಬೇಕು, ಅನುದಾನ ವಿಳಂಬವಾದ ಅವಧಿಯಲ್ಲಿ ಸಾರ್ವಜನಿಕ ಸೇವೆಗಾಗಿ ನಿರ್ವಹಿಸಲಾದ ತುರ್ತು ವೆಚ್ಚಗಳನ್ನು ಪಾವತಿಸಲು ಕೆ.ಟಿ.ಪಿ.ಪಿ ಕಾಯ್ದೆಯ ಸೆಕ್ಷನ್ 4(ಇ) ಈ ಒಂದು ಅವಧಿಗೆ ಮಾತ್ರ ವಿಶೇಷ ವಿನಾಯಿತಿ ನೀಡಿ ಇಲಾಖೆಯಿಂದ ಸ್ಪಷ್ಟ ಮಾರ್ಗಸೂಚಿ ಹೊರಡಿಸಬೇಕು. ಅಧಿಕೃತವಾಗಿ ಸಾಮಗ್ರಿ ಪಡೆದು ಕೆಲಸ ನಿರ್ವಹಿಸಿದ ಅಧಿಕಾರಿಗಳ ಮೇಲೆ ಯಾವುದೇ ಕಾನೂನಾತ್ಮಕ ದೂರುಗಳು ಅಥವಾ ಆಡಿಟ್ ಆಕ್ಷೇಪಣೆಗಳು ಬರದಂತೆ ಇಲಾಖೆಯು ಪೂರ್ಣ ರಕ್ಷಣೆ ನೀಡಬೇಕು ಮತ್ತು ಬೆದರಿಕೆ ಹಾಕುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮಕ್ಕೆ ಸೂಚಿಸಿ ಗ್ರಾಮೀಣ ಭಾಗದ ನಾಗರಿಕರಿಗೆ ತೊಂದರೆ ಯಾಗದಂತೆ ಮತ್ತು ಅಧಿಕಾರಿಗಳು ಮುಕ್ತವಾಗಿ, ಭಯಮುಕ್ತವಾಗಿ ಕೆಲಸ ಮಾಡಲು ಕ್ರಮ ಕೈಗೊಳಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಮಯದಲ್ಲಿ ಕರ್ನಾಟಕ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ ಮೂಡಲಗಿ ತಾಲೂಕಾ ಘಟಕದ ಅಧ್ಯಕ್ಷ ಸತ್ತೆಪ್ಪ ಬಬಲಿ, ಉಪಾಧ್ಯಕ್ಷ ಶಿವಾನಂದ ಗುಡಶಿ, ಪ್ರದಾನ ಕಾರ್ಯದರ್ಶಿ ಶ್ರೀಶೈಲ ತಡಸನವರ ಹಾಗೂ ಪದಾಧಿಕಾರಿಗಳಾದ ಎಚ್.ವಾಯ್.ತಾಳಿಕೋಟಿ, ರಂಗಪ್ಪ ಗುಜನಟ್ಟಿ, ರವಿ ಮರೆನ್ನವರ, ಅಂಜನಾ ಗಚ್ಚಿ ಮತ್ತಿತರರು ಉಪಸ್ಥಿತರಿದ್ದರು.

# ಬಾಬು ಜಗಜೀವನ ರಾಮ್ ಜಯಂತಿ ಮಾಡದೆ ನಿರ್ಲಕ್ಷ್ಯ: ಅಧಿಕಾರಿ ವಿರುದ್ಧ ದಲಿತ ಮುಖಂಡರ ಆಕ್ರೋಶ



**ಬೆಳಗಾವಿ ವಾರ್ತೆ ಅಥಣಿ:** ಡಾ. ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಗೌರವಯುತವಾಗಿ ಆಚರಿಸುವಲ್ಲಿ ನಿರ್ಲಕ್ಷ್ಯ ವಹಿಸಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಅಧಿಕಾರಿ ರವೀಂದ್ರ ಮುರಗಾಲಿ ಅವರ ಧೋರಣೆಯನ್ನು ಖಂಡಿಸಿ, ಸೋಮವಾರ ಕಚೇರಿ ಆವರಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಮುಖಂಡ ಶಿವಾನಂದ ಸೌದಾಗರ ತಿಳಿಸಿದ್ದಾರೆ.

ಮಾಧ್ಯಮದವರ ಮುಂದೆ ಮಾತನಾಡಿದ ಶಿವಾನಂದ ಸೌದಾಗರ ಅಧಿಕಾರಿಗಳ ಬೇಜವಾಬ್ದಾರಿಯನ್ನು ಎಳೆಎಳೆಯಾಗಿ ಬಿಚ್ಚಿಟ್ಟರು. "ಜಯಂತಿಯ ದಿನದಂದು ಕಚೇರಿಯಲ್ಲಿ ಯಾವುದೇ ಪೂಜೆ ಪುನಸ್ಕಾರ ಮಾಡಿರಲಿಲ್ಲ. ಈ ಬಗ್ಗೆ ಪ್ರಶ್ನಿಸಿದಾಗ, ಅಧಿಕಾರಿಗಳು ಹಾರಿಕೆ ಉತ್ತರ ನೀಡಿದ್ದಾರೆ. ದಲಿತ ಮುಖಂಡರು ಒತ್ತಾಯಿಸಿದ ನಂತರ ಮಧ್ಯಾಹ್ನ 2 ಗಂಟೆಗೆ ಪೂಜೆ ಮಾಡಲು ಸಂತೋಷ್ ಚೌವ್ಹಾಣ್ ಎಂಬ ಸಿಬ್ಬಂದಿಯನ್ನು ಕಳುಹಿಸಲಾಗಿತ್ತು. ಆದರೆ, ಆ ಸಿಬ್ಬಂದಿ ಮದ್ಯದ ಅಮಲಿನಲ್ಲಿ ಕಚೇರಿಗೆ ಬಂದು ಪೂಜೆ ಮಾಡಲು ಮುಂದಾಗಿದ್ದಾನೆ. ಇದನ್ನು ಸಾರ್ವಜನಿಕರು ಪ್ರಶ್ನಿಸಿದಾಗ ಕಚೇರಿಯನ್ನು ತೆರೆದಿಟ್ಟು ಅಲ್ಲಿಂದ ಪರಾರಿಯಾಗಿದ್ದಾನೆ. ತದನಂತರ ಸಂಜೆ 3:50ರ ಸುಮಾರಿಗೆ ಇಲಾಖೆಯ ಸಿಪಾಯಿ ಬಂದು ಕಾಟಾಚಾರಕ್ಕೆ ಪೂಜೆ ಮುಗಿಸಿದ್ದಾರೆ" ಎಂದು ಅವರು ಆರೋಪಿಸಿದರು.

ಮರುದಿನ ಮಧ್ಯಾಹ್ನ 3 ಗಂಟೆಗೆ ಕಚೇರಿಗೆ ಆಗಮಿಸಿದ ಅಧಿಕಾರಿ ರವೀಂದ್ರ ಮುರಗಾಲಿ ಅವರನ್ನು ಶಿವಾನಂದ ಸೌದಾಗರ ಹಾಗೂ ಇತರ ನಾಯಕರು ತರಾಟೆಗೆ ತೆಗೆದುಕೊಂಡರು. ಈ ವೇಳೆ ಉತ್ತರಿಸಿದ ಅಧಿಕಾರಿಯು, "ನಾನು ರಜೆಯಲ್ಲಿದ್ದ ಕಾರಣ ಬರಲು ಸಾಧ್ಯವಾಗಲಿಲ್ಲ. ಮದ್ಯ ಸೇವಿಸಿ ಬಂದ ಸಿಬ್ಬಂದಿ ಸಂತೋಷ್ ಚೌವ್ಹಾಣ್ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು" ಎಂದು ತಿಳಿಸಿದ್ದಾರೆ.

ರಾಷ್ಟ್ರೀಯ ನಾಯಕರ ಜಯಂತಿಯನ್ನು ಅವಮಾನಿಸಿದ ಅಧಿಕಾರಿ ಮತ್ತು ಸಿಬ್ಬಂದಿಯ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿ ನಾಳೆ ಬೆಳಿಗ್ಗೆ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಯಲಿದೆ. "ಈ ಘಟನೆಯು ದಲಿತ ಸಮುದಾಯಕ್ಕೆ ಹಾಗೂ ಮಹಾನ್ ನಾಯಕರಿಗೆ ಮಾಡಿದ ಅಪಮಾನ. ಆದ್ದರಿಂದ ನಾಳೆ ದಲಿತ ಸಮಾಜದ ಮುಖಂಡರು, ಪ್ರಮುಖರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನ್ಯಾಯಕ್ಕಾಗಿ ಧ್ವನಿ ಎತ್ತಬೇಕು" ಎಂದು ಸೌದಾಗರ ಕರೆ ನೀಡಿದ್ದಾರೆ.



# 6 ವರ್ಷದ ಮಕ್ಕಳ ಸಮಗ್ರ ಸಮೀಕ್ಷೆ 3 ತಿಂಗಳಲ್ಲಿ ಪೂರ್ಣ



ವಿಜಯಪುರ: ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಜೊತೆ ಸಮನ್ವಯ ಸಭೆ ನಡೆಸಿ 6 ವರ್ಷದ ಮಕ್ಕಳ ಸಮಗ್ರ ಸಮೀಕ್ಷೆ ನಡೆಸುವಂತೆ ಸಿಇಒ ಅವರಿಗೆ ನಿರ್ದೇಶನ ನೀಡಲಾಗಿದೆ ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹ್ಮದ್ ಹೇಳಿದರು.

ವಿಜಯಪುರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲೆಯಲ್ಲಿರುವ 6 ವರ್ಷದ ಮಕ್ಕಳ ಸಂಖ್ಯೆ ಇದೆ. ಆದರೆ ಶಾಲೆಯಿಂದ ಅನೇಕ ಮಕ್ಕಳು ಹೊರಗುಳಿದಿರುವ ಸಾಧ್ಯತೆಯನ್ನೂ ಅಲ್ಲಗಳೆಯುವಂತಿಲ್ಲ. ರಾಜ್ಯದಲ್ಲಿರುವ ಆರು ವರ್ಷದ ಮಕ್ಕಳ ಸಂಖ್ಯೆ ದತ್ತಾಂಶಗಳ ಸಂಗ್ರಹಣೆಯೇ ಇಲ್ಲ, ಕಳೆದ ಒಂದು ವರ್ಷದಿಂದ ಈ ನಿಖರವಾದ ದತ್ತಾಂಶ ಸಂಗ್ರಹಣೆ ಪ್ರಯತ್ನ ನಡೆಸಲಾಗುತ್ತಿದೆ, 100 ಮಕ್ಕಳು 6 ವರ್ಷದವರು ಇದ್ದರೆ ಅದರಲ್ಲಿ ಶಾಲೆಗೆ ಸೇರಿದ ಮಕ್ಕಳ ಸಂಖ್ಯೆ 80 ಇರಬಹುದು.

ಶಾಲೆಯಲ್ಲಿರುವ ಮಕ್ಕಳು ಹೊರತುಪಡಿಸಿ 6 ವರ್ಷದ ಮಕ್ಕಳ ಸಂಖ್ಯೆ ಇಲ್ಲಿಯವರೆಗೂ ಲಭ್ಯವಾಗಿಲ್ಲ ಎಂದರು.

ಈ ಹಿನ್ನೆಲೆಯಲ್ಲಿ ಕೂಡಲೇ ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸಮನ್ವಯ ಸಭೆ ನಡೆಸಿ ಈ ನಿಖರವಾದ ದತ್ತಾಂಶ ಸಂಗ್ರಹಣೆಗೆ ಅಗತ್ಯ ಕಾರ್ಯಯೋಜನೆ ರೂಪಿಸಿ ಎಂದು ಹೇಳಲಾಗಿದ್ದು, ಜಿಲ್ಲೆಯಲ್ಲಿ 3 ತಿಂಗಳಲ್ಲಿ ಈ ದತ್ತಾಂಶ ಸಂಗ್ರಹಣೆ ಕಾರ್ಯ ಪೂರ್ಣಗೊಳ್ಳುವ ಸಾಧ್ಯತೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದು ಒಂದು ರೀತಿ ಪೈಲಟ್ ಪ್ರಾಜೆಕ್ಟ್ ರೀತಿಯಲ್ಲಿ ಈ ದತ್ತಾಂಶ ಸಂಗ್ರಹಣೆಯ ಕಾರ್ಯ ನಡೆಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಯೋಜನೆಗಳ ಅನುಷ್ಠಾನ, ಅಲ್ಪಸಂಖ್ಯಾತರಿಗೆ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ಮುಟ್ಟುತ್ತಿರುವ ಬಗ್ಗೆ ಸುದೀರ್ಘವಾದ ಸಭೆ ನಡೆಸಿ ಸಂಬಂಧಿಸಿದ ಇಲಾಖೆಯ ಪರಾಮರ್ಶೆ ಮಾಡಲಾಗಿದೆ ಎಂದರು.

ಸಾಮಾಜಿಕ ಜಾಲತಾಣದಲ್ಲಿ ಅಸಭ್ಯ ರೀತಿಯ ಸಂದೇಶವನ್ನು ನೇರವಾಗಿ ಡಿಲೀಟ್ ಮಾಡುವ ಅಧಿಕಾರ ಪೊಲೀಸ್ ಇಲಾಖೆಗೆ ಇಲ್ಲ, ಪೊ?ಸ್ಟ್ ಹಾಕಿದವರಿಗೆ ಈ ಕಂಟೆಂಟ್ ಡಿಲೀಟ್ ಮಾಡಿ ಎಂದು ಸೂಚನೆ ನೀಡುವ ಅಧಿಕಾರ ಇದೆ. ಈ ನಿಟ್ಟಿನಲ್ಲಿ ವಿಜಯಪುರ ಪೊಲೀಸರು ಉತ್ತಮವಾಗಿ ಕಾರ್ಯಾಚರಣೆ ನಡೆಯುತ್ತಿದ್ದು, ಈ ರೀತಿ ಕಳೆದ ವರ್ಷದಲ್ಲಿ ಅಸಭ್ಯ ರೀತಿಯಲ್ಲಿ ಪೋಸ್ಟ್ ಮಾಡಲಾದ 21 ಪೊ?ಸ್ಟ್ ಗಳನ್ನು ಡಿಲೀಟ್ ಮಾಡಿಸುವಲ್ಲಿ ಯಶಸ್ವಿಯಾಗಿದ್ದು, ಈ ವರ್ಷ ಈಗಾಗಲೇ 21 ಪೊ?ಸ್ಟ್ ಡಿಲೀಟ್ ಮಾಡಿಸಿದ್ದಾರೆ ಎಂಬ ಮಾಹಿತಿ ನೀಡಿದರು.

**ಎಪ್ಲಾಯಿಮೆಂಟ್ ಪ್ಲಾಟ್‌ಫಾರ್ಮ್**

ಉದ್ಯೋಗ ಕಲ್ಪಿಸುವ ಕಾರ್ಯಕ್ಕೂ ಆಯೋಗ ವಿಶೇಷ ಮುತವರ್ಜಿ ಹಾಗೂ ಈ ನಿಟ್ಟಿನಲ್ಲಿ ವಿಶೇಷ ಹೆಜ್ಜೆ ಇರಿಸಿದೆ. ಅಲ್ಪಸಂಖ್ಯಾತ ಆಯೋಗ ಉದ್ಯೋಗ ಮೇಳವನ್ನು ಪ್ರಥಮ ಬಾರಿಗೆ ಆಯೋಜಿಸಿದೆ. ಬೆಂಗಳೂರಿನಲ್ಲಿ ವಿಶ್ವವಿದ್ಯಾಲಯವೊಂದರ ಸಹಯೋಗದಲ್ಲಿ 200 ಕ್ಕೂ ಹೆಚ್ಚು ಕಂಪನಿಗಳನ್ನು ಆಹ್ವಾನಿಸಲಾಗಿದ್ದು, ಸಾವಿರಾರು ಉದ್ಯೋಗಿಗಳಿಗೆ ಸ್ಥಳದಲ್ಲಿಯೇ ಉದ್ಯೋಗ ಆದೇಶ ಪತ್ರ ಒದಗಿಸುವ ಕೆಲಸ ಮಾಡಲಾಗಿದ್ದು, ಉದ್ಯೋಗ ಮಾಹಿತಿ ಒದಗಿಸುವ ಎಂಪ್ಲಾಯಿಮೆಂಟ್ ಪ್ಲಾಟ್‌ಫಾರ್ಮ್ ರೂಪಿಸುವ ಕೆಲಸ ಮಾಡಲಾಗಿದೆ ಎಂದರು. ಆಯೋಗದ ಜಾಲತಾಣವನ್ನು ಉದ್ಯೋಗ, ಜ್ಞಾನ ಮಾಹಿತಿ ನೀಡುವ ನಿಟ್ಟಿನಲ್ಲಿ ಸಮಗ್ರವಾಗಿ ರೂಪಿಸಲಾಗಿದೆ ಎಂದರು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತವಾಗಿ ತರಬೇತಿ ನೀಡುವ ನಿಟ್ಟಿನಲ್ಲಿಯೂ ಆಯೋಗ ಕಾರ್ಯೋನ್ಮುಖವಾಗಿದ್ದು, ಉತ್ತರ ಕರ್ನಾಟಕ ಭಾಗದಲ್ಲಿ ಈ ತರಬೇತಿಗೆ ಆದ್ಯತೆ ನೀಡಲಾಗಿದೆ ಎಂದರು.

ಕಳೆದ ಒಂದೂವರೆ ವರ್ಷದಿಂದ ಈ ಜವಾಬ್ದಾರಿ ವಹಿಸಿದ್ದು, ಸಾಮರಸ್ಯ ಸದ್ಭಾವನೆ ಮೂಡಿಸುವ ನಿಟ್ಟಿನಲ್ಲಿ ವಿಶೇಷ ಆದ್ಯತೆ ನೀಡಲಾಗಿದ್ದು, ಸರ್ವಧರ್ಮದ ಸಾಧಕರಿಗೆ ಸಾಧಕರಿಗೆ ಪ್ರಶಸ್ತಿ ನೀಡುವ ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ಅಪೂರ್ವ ಕಾರ್ಯಕ್ರಮವನ್ನು ಯಶಸ್ವಿಯಾಗಿ ಸಂಘಟಿಸಲಾಗಿದೆ ಎಂದರು.

# ಬಿಜೆಪಿ ಕಚೇರಿಯಲ್ಲಿ ಪಕ್ಷದ ಸಂಸ್ಥಾಪನ ದಿನಾಚರಣೆ



**ಬೆಳಗಾವಿ ವಾರ್ತೆ ವಿಜಯಪುರ:** ಭಾರತೀಯ ಜನತಾ ಪಕ್ಷದ ಸಂಸ್ಥಾಪನಾ ದಿನವನ್ನು ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಆಚರಿಸಲಾಯಿತು.

ಭಾರತಮಾತೆ ಹಾಗೂ ಪಕ್ಷದ ಸಂಸ್ಥಾಪನೆ ಮಾಡಿದ ಮಹನೀಯರ ಭಾವಚಿತ್ರಗಳಿಗೆ ಪುಷ್ಪಾಂಜಲಿ ಸಲ್ಲಿಸಲಾಯಿತು. ಕಾರ್ಯಕರ್ತರು ಉತ್ಸಾಹದಿಂದ ಬಿಜೆಪಿ ಪಕ್ಷದ ಧ್ವಜವನ್ನು ಪ್ರದರ್ಶಿಸಿ ದೇಶಾಭಿಮಾನದ ಘೋಷಣೆಗಳನ್ನು ಕೂಗಿದರು.

ಈ ವೇಳೆ ಮಾತನಾಡಿದ ಸಂಸದ ರಮೇಶ ಜಿಗಜಿಣಗಿ, ರಾಷ್ಟ್ರಾಭಿಮಾನವನ್ನೇ ಉಸಿರಾಗಿಸಿಕೊಂಡಿರುವ ಬಿಜೆಪಿ ಇಂದು ವಿಶ್ವದಲ್ಲಿಯೇ ಅತ್ಯಂತ ದೊಡ್ಡ ರಾಜಕೀಯ ಪಕ್ಷವಾಗಿದೆ. ಶ್ಯಾಂ ಪ್ರಸಾದ್ ಮುಖರ್ಜಿ, ಪಂ.ದೀನದಯಾಳ ಉಪಾಧ್ಯಾಯ ಅವರಂತಹ ಶ್ರೇಷ್ಠ ಚಿಂತನೆಯ ಸ್ವರೂಪದಲ್ಲಿ ಉದಯಿಸಿದ ಬಿಜೆಪಿ ಇಂದಿಗೂ ಜನ ಸೇವೆಯನ್ನೇ ಉಸಿರಾಗಿಸಿಕೊಂಡಿದೆ. ಪಕ್ಷ ಇಂದು ಹೆಮ್ಮರವಾಗಿ ಬೆಳೆದಿದೆ. ಬಿಜೆಪಿಯ ದೇಶನಿಷ್ಠೆಯ ಫಲವಾಗಿಯೇ ಇಂದು ಎಲ್ಲ ರಾಜ್ಯಗಳಲ್ಲಿ ಬಿಜೆಪಿ ಅರಳಿದೆ. ಉತ್ತಮ ಆಡಳಿತ ನೀಡುವ ಮೂಲಕ ಕೇಂದ್ರದ ಬಿಜೆಪಿ ಸರ್ಕಾರ ವಿಶ್ವದಲ್ಲಿಯೇ ದೊಡ್ಡ ಹೆಸರು ಮಾಡಿದೆ ಎಂದರು.

ಬಿಜೆಪಿ ಪಕ್ಷ ನಮ್ಮ ಉಸಿರು, ಕಾರ್ಯಕರ್ತರು ನಮ್ಮ ಆಸ್ತಿ, ಈ ಪವಿತ್ರ ಪಕ್ಷದಲ್ಲಿರುವ ಅವಕಾಶ ನನಗೆ ಒದಗಿ ಬಂದಿರುವುದು ನನ್ನ ಪೂರ್ವಜನ್ಮದ ಪುಣ್ಯ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಭಾರತೀಯ ಸಂಸ್ಕೃತಿ, ಅದಮ್ಯ ದೇಶಭಕ್ತಿ, ದೇಶಕ್ಕಾಗಿ ಸಮರ್ಪಣಾ ಮನೋಭಾವ, ಸ್ವದೇಶಿ, ಸ್ವಾಭಿಮಾನ, ಆತ್ಮನಿರ್ಭರ ಈ ಎಲ್ಲ ತತ್ವಗಳು ಬಿಜೆಪಿಯ ಆಧಾರ ಸ್ತಂಭಗಳಾಗಿವೆ. ಉಳಿದ ರಾಜಕೀಯ ಪಕ್ಷಗಳಂತೆ ಬಿಜೆಪಿ ಅಲ್ಲ. ಬಿಜೆಪಿ ಜನ ಹಿತ, ರಾಷ್ಟ್ರ ಹಿತವೇ ಆದ್ಯ ಎಂದರು.

ಬಿಜೆಪಿ ಪಕ್ಷ ಇಂದು ವಿಶ್ವದಲ್ಲಿಯೇ ಅತ್ಯಂತ ಹೆಚ್ಚು ಸದಸ್ಯರನ್ನು ಹೊಂದಿರುವುದೇ ಬಿಜೆಪಿಯ ಬದ್ಧತೆಯ ಒಂದು ಸಾಕ್ಷಿ ಎಂದರು.

ಬಿಜೆಪಿ ಮುಖಂಡ ಚಂದ್ರಶೇಖರ ಕವಟಗಿ ಮಾತನಾಡಿದರು.

ಪ್ರಮುಖರಾದ ವಿಜುಗೌಡ ಪಾಟೀಲ, ಸಂಜೀವ ಐಹೊಳೆ, ವಿವೇಕಾನಂದ ಡಬ್ಬಿ, ವಿಜಯಕುಮಾರ ಕೊಡಗಿನೂರ, ಸಂಜಯ ಪಾಟೀಲ ಕನಮಡಿ, ಮಳುಗೌಡ ಪಾಟೀಲ, ಈರಣ್ಣ ರಾವೂರ, ಮಹೇಂದ್ರಕುಮಾರ ನಾಯಕ, ಎಸ್.ಎ. ಪಾಟೀಲ, ಬಸವರಾಜ ಬೈಚಬಾಳ, ಉಮೇಶ ಕೊಳಕೂರ, ರಮೇಶ ಬಿದನೂರ, ಮಲ್ಲಿಕಾರ್ಜುನ ಜೋಗೂರ, ಸ್ವಪ್ನಾ ಕಣಮುಚನಾಳ, ಮಲ್ಲು ಕಲಾದಗಿ, ಸಂದೀಪ ಪಾಟೀಲ, ಸಿದ್ದನಗೌಡ ಬಿರಾದಾರ, ವಿಜಯ ಜೋಶಿ, ಹರ್ಷಗೌಡ ಪಾಟೀಲ, ಪಾಪುಸಿಂಗ್ ರಜಪೂತ, ಭರತ ಕೋಳಿ, ಶರಣಬಸಪ್ಪ ಕುಂಬಾರ, ವಿನಾಯಕ ದಹಿಂಡೆ, ಅಪ್ಪು ಕುಂಬಾರ, ವಿಕಾಸ ಪದಕಿ, ಮಹಾದೇವ ದರ್ಗಾ, ಕಲ್ಮೇಶ ಹಿರೇಮಠ ಹಾಗೂ ವಾರೀಶ ಕುಲಕರ್ಣಿ ಪಾಲ್ಗೊಂಡಿದ್ದರು.

# ಪ್ರಿ ಕ್ವಾರ್ಟರ್ ಫೈನಲ್ ತಲುಪಿದ ಮಹಿಳಾ ವಿವಿ ಖೋಖೋ ತಂಡ

**ಬೆಳಗಾವಿ ವಾರ್ತೆ ವಿಜಯಪುರ:** ದಾವಣಗೆರೆ ವಿವಿಯಲ್ಲಿ ಏ.1ರಿಂದ 4ವರೆಗೆ ನಡೆದ ದಕ್ಷಿಣ ವಲಯ ಅಂತರ್ ಮಹಾವಿದ್ಯಾಲಯಗಳ ಖೋಖೋ ಪಂದ್ಯದಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ವಿವಿ ತಂಡ ಪ್ರಿ ಕ್ವಾರ್ಟರ್ ಫೈನಲ್ ಪ್ರವೇಶಿಸಿ ವಿವಿ ಕೀರ್ತಿ ಹೆಚ್ಚಿಸಿದೆ.

ತಂಡದ ಸಾಧನೆಗೆ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಆಂಧ್ರದ ತಿರುಪತಿ ವಿವಿ, ತಮಿಳುನಾಡಿನ ಭಾರತೀಯರ ವಿವಿ ಹಾಗೂ ಕೇರಳದ ಕಣ್ಣೂರು ವಿವಿ ವಿರುದ್ಧ ಪಂದ್ಯದಲ್ಲಿ ಮಹಿಳಾ ವಿವಿ ತಂಡ ಜಯಗಳಿಸುವ ಮೂಲಕ ರಾಜ್ಯ ಪ್ರತಿನಿಧಿಸಿ ಸಾಧನೆ ಮೆರೆದಿದೆ.

ತಂಡದ ನಾಯಕಿ, ಎಂಪಿಇಡಿ ವಿದ್ಯಾರ್ಥಿನಿ ದೀಪಾ ಸಂತಿವರ್, ತರಬೇತುದಾರ ಶಿವಪ್ರಕಾಶ್ ಎಲಿ, ವ್ಯವಸ್ಥಾಪಕ ಸಿಂದಗಿಯ ಪೂಜಾರ್, ಟೂರ್ನಾಮೆಂಟ್ ವೀಕ್ಷಕರಾಗಿ ಭಾಗವಹಿಸಿದ ಪ್ರೊ.ಶ್ರೀನಿವಾಸ ಮತ್ತು ಪ್ರೊ. ರಾಜಕುಮಾರ್ ಮಾಲಿ ಪಾಟೀಲ್ ಅವರಿಗೆ ಕುಲಪತಿ ಪ್ರೊ. ವಿಜಯಾ ಕೋರಿಶೆಟ್ಟಿ, ಕುಲಸಚಿವ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಬಸವರಾಜ ಲಕ್ಕಣ್ಣನವರ, ಆರ್ಥಿಕ




ಅಧಿಕಾರಿ ರಾಮಣ್ಣ ಅಥಣಿ, ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ. ಹನುಮಂತಯ್ಯ ಪೂಜಾರ, ಉಪನಿರ್ದೇಶಕ ಡಾ. ವಿಶ್ವನಾಥ ನಡಕಟ್ಟಿ ಅಭಿನಂದನೆ ಸಲ್ಲಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001